# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 109 | ಶೀರ್ಷಿಕೆ ಕೋಡ್: ಕೆಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 08-11-2023 ಬುಧವಾರ | ಪುಟ: 4 | ಬೆಲೆ : ರೂ.2–00
Volume - 01 Issue - 109 | Title- Code: KARKAN 28269 | Chitradurga | Date: 08-11-2023 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ವಿಜೃಂಭಣೆಯಿಂದ ಓಬವ್ವ ಜಯಂತಿ ಆಚರಿಸೋಣ: ಎಡಿಸಿ 2

ಸಮವಸ್ತ್ರ ಮೈಮೇಲಿದ್ದರೆ ಶಿಸ್ತು ಮೂಡಿಸುತ್ತದೆ: ಎಸ್ಪಿ 3

ತೆಲಂಗಾಣ ಚುನಾವಣೆ: ಅಲಂಪೂರ್ ಕ್ಷೇತ್ರದ ವೀಕ್ಷಕರಾಗಿ ರಘುಮೂರ್ತಿ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಶ್ರೀ ಮಾರಿಕಾಂಭ ದೇವಿ ಅಮ್ಮನವರ ನೂತನ ರಥ ಉದ್ಘಾಟನೆ



» **ಚಿತ್ರದುರ್ಗ**

ಚಿತ್ರದುರ್ಗ ತಾಲೂಕಿನ ಇಂಗಳದಾಳ್ ಗ್ರಾಮದಲ್ಲಿ ಶ್ರೀ ಮಾರಿಕಾಂಭ ದೇವಿ ಅಮ್ಮನವರ ನೂತನ ರಥ ( ಉಚ್ಚಯ)ವನ್ನು ಉದ್ಘಾಟನೆ ಕಾರ್ಯಕ್ರಮವನ್ನು ದಿನಾಂಕ–10–11–2023 ರ ಶುಕ್ರವಾರದಂದು ಹಮ್ಮಿಕೊಳ್ಳಲಾಗಿದೆ. ಶುಕ್ರವಾರ ಬೆಳಗ್ಗೆ 11–45 ರಿಂದ 1 ಗಂಟೆವರೆಗೆ ನೂತನ ರಥ ಶುದ್ಧಿ ಪೂಜಾ ವಿಧಿ ವಿಧಾನ ನೇವವೇರಿಸಲಾಗುತ್ತದೆ. ಅಂದು ಗಣಪತಿ ಪೂಜೆ, ಗಂಗಾಪೂಜೆ, ಪುಣ್ಯಹಾ ಶುದ್ಧಿ, ಪಂಚಗವ್ಯ ಶುದ್ಧಿ, ಕೂಷ್ಮಂಡ ಬಲಿ, ಅನ್ನ ಬಲಿ, ಮಹಾಮಂಗಳಾರತಿ ನಂತರ ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸುವ ಸಾವಿರಾರು ಭಕ್ತರಿಗೆ ಅನ್ನ ಸಂತರ್ಪಣೆ ವ್ಯವಸ್ಥೆ ಸಹ ಮಾಡಲಾಗಿದ್ದು ಎಲ್ಲಾ ಭಕ್ತರು ಆಗಮಿಸಿ ಯಶಸ್ವಿಗೊಳಿಸುವ ಮೂಲಕ ದೇವರ ಕೃಪೆಗೆ ಪಾತ್ರರಾಗಬೇಕೆಂದು ಇಂಗಳದಾಳ್ ಗ್ರಾಮಸ್ಥರು ಕೋರಿದ್ದಾರೆ..

### ಕುಡಿಯುವ ನೀರು ಸಮಸ್ಯೆಯಾತ್ಮಕ ಗ್ರಾಮಗಳ ಪಟ್ಟಿ ತಯಾರಿಸಿ: ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಸೂಚನೆ

# ನೀರಿನ ಸಮಸ್ಯೆ ಆಗದಂತೆ ಕ್ರಮವಹಿಸಿ

» **ಚಿತ್ರದುರ್ಗ**

ಬರ ಹಿನ್ನಲೆಯಲ್ಲಿ ಜಿಲ್ಲೆಯ ಜನರು ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ, ಮುಂಜಾಗ್ರತಾ ಕ್ರಮವಾಗಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸುವಂತಹ ಸಮಸ್ಯೆಯಾತ್ಮಕ ಗ್ರಾಮಗಳ ಪಟ್ಟಿ ತಯಾರಿಸಿ, ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ಗ್ರಾಮಗಳಲ್ಲಿ ತಕ್ಷಣ ಪರಿಹಾರ ಕಾರ್ಯಕೈಗೊಳ್ಳಬೇಕು, ಪರಿಹಾರ ಕಾರ್ಯಗಳ ಬಗ್ಗೆ ಕ್ರಿಯಾ ಯೋಜನೆ ರೂಪಿಸಬೇಕು ಎಂದು ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ಜಿಲ್ಲೆಯ ಬರ ನಿರ್ವಹಣೆ ಕುರಿತು ಹಮ್ಮಿಕೊಂಡಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಆರು ತಾಲ್ಲೂಕುಗಳಲ್ಲೂ ಯಾವುದೇ ರೀತಿಯ ಕುಡಿಯುವ ನೀರಿನ ಸಮಸ್ಯೆ ತಲೆದೋರದಂತೆ ಕ್ರಮಕೈಗೊಳ್ಳಬೇಕು. ಕುಡಿಯುವ ನೀರಿನ ಸಮಸ್ಯೆ ಇರುವ ಗ್ರಾಮಗಳಿಗೆ ತುರ್ತಾಗಿ ನೀರು ಪೂರೈಸಲು ಕ್ರಮ ಕೈಗೊಳ್ಳಬೇಕು ಎಂದು ತಾಕೀತು ಮಾಡಿದರು.

ಜಿಲ್ಲೆಯ ಹೊಸದುರ್ಗ ಹಾಗೂ ಹಿರಿಯೂರು ತಾಲ್ಲೂಕುಗಳಲ್ಲಿ ಕುಡಿಯುವ ನೀರಿಗೆ ಸಂಬಂಧಪಟ್ಟಂತೆ ಈಗಾಗಲೇ ಸಭೆ ನಡೆಸಲಾಗಿದೆ. ಕುಡಿಯುವ ನೀರಿನ ಸಮಸ್ಯೆ ಇರುವ ಗ್ರಾಮಗಳನ್ನು ಪಟ್ಟಿ ಮಾಡಲಾಗಿದೆ. ಇದರ ಜೊತೆಗೆ ಖಾಸಗಿ ಬೋರ್‌ವೆಲ್‌ಗಳನ್ನು ಗುರುತಿಸಲಾಗಿದೆ. ಸದ್ಯದ ಪರಿಸ್ಥಿತಿಯಲ್ಲಿ ಕುಡಿಯುವ ನೀರಿನ ಅಭಾವ ಇರುವ ಜಿಲ್ಲೆಯ 125 ಸಮಸ್ಯಾತ್ಮಕ ಹಳ್ಳಿಗಳನ್ನು ಪಟ್ಟಿ ಮಾಡಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್ ಸಭೆಗೆ ಮಾಹಿತಿ ನೀಡಿದರು.

ಶಾಸಕ ಟಿ.ರಘುಮೂರ್ತಿ ಮಾತನಾಡಿ, ಕುಡಿಯುವ ನೀರಿನ ಸಮಸ್ಯೆ ಇರುವ ಹಳ್ಳಿಗಳಲ್ಲಿ ಬೋರ್‌ವೆಲ್ ಕೊರೆಸಲು ಅವಕಾಶ ನೀಡಬೇಕು. ಬೋರ್‌ವೆಲ್ ಕೊರೆಸಲು ಇರುವ ಮಾರ್ಗಸೂಚಿಗಳನ್ನು ಸರಳಗೊಳಿಸಬೇಕು. ಬೋರ್‌ವೆಲ್‌ಗೆ ಅನುಮತಿ ಪಡೆಯುವ ವಿಧಾನವೂ ತ್ವರಿತವಾಗಬೇಕು.

ಪೈಪ್, ಮೋಟಾರ್ ವ್ಯವಸ್ಥೆಯೊಂದಿಗೆ ಬೋರ್‌ವೆಲ್ ಕೊರೆಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದಕ್ಕೆ ಧ್ವನಿಗೂಡಿಸಿದ ಶಾಸಕ ಎಂ.ಚಂದ್ರಪ್ಪ ಕುಡಿಯುವ ನೀರಿನ ಸಮಸ್ಯೆ ಆದ ತಕ್ಷಣವೇ ಬೋರ್‌ವೆಲ್ ಕೊರೆಸುವ ವ್ಯವಸ್ಥೆ ಆಗಬೇಕು. ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ಗ್ರಾಮೀಣ ಕುಡಿಯುವ ನೀರು ಹಾಗೂ ನೈರ್ಮಲ್ಯ ಇಲಾಖೆ ಅಧಿಕಾರಿಗಳ ಜವಾಬ್ದಾರಿ ಹೆಚ್ಚಿದೆ. ಇದಕ್ಕೆ ಸಂಬಂಧಪಟ್ಟಂತೆ ಅಧಿಕಾರಗಳ ವಿಶೇಷ ತಂಡ ರಚನೆ ಮಾಡಿ, ನೀರಿನ ಸಮಸ್ಯೆಯಾಗದಂತೆ ಶೀಘ್ರ ಎಚ್ಚೆತ್ತುಕೊಳ್ಳಬೇಕು ಎಂದು ತಾಕೀತು ಮಾಡಿದರು.

ಶಾಸಕ ಎನ್.ವೈ.ಗೋಪಾಲಕೃಷ್ಣ ಮಾತನಾಡಿ, ಜನರಿಗೆ ನೀರು, ಜಾನುವಾರುಗಳಿಗೆ ಮೇವು ಸಿಗಬೇಕು. ಈ ಕುರಿತು ಅಧಿಕಾರಿಗಳು ಅಗತ್ಯ ಕ್ರಮವಹಿಸಬೇಕು. ಬರ ಪರಿಹಾರ ಕಾರ್ಯಗಳನ್ನುಕೈಗೊಳ್ಳುಕ್ರಿಯಾಯೋಜನೆ ರೂಪಿಸಬೇಕು ಎಂದು ತಿಳಿಸಿದರು.


ಪುಟ ↘ 2




### ತೆಂಗು ಪುನಶ್ಚೇತನಕ್ಕೆ 3.04 ಕೋಟಿ

ಜಿಲ್ಲೆಯ ಹೊಸದುರ್ಗ, ಹಿರಿಯೂರು ಮತ್ತು ಹೊಳಲ್ಕೆರೆ ತಾಲ್ಲೂಕಿನಲ್ಲಿ ತೆಂಗು ಬೆಳೆಗೆ ಕಪ್ಪು ತಲೆ ಹುಳು ಬಾಧೆಯಿಂದ ಉಂಟಾಗಿರುವ ಹಾನಿಯನ್ನು ತಡೆಗಟ್ಟಿ, ತೆಂಗು ಬೆಳೆಯನ್ನು ಪುನಶ್ಚೇತನಗೊಳಿಸಲು ಸರ್ಕಾರ ಮೊದಲ ಹಂತದಲ್ಲಿ ವಿಶೇಷವಾಗಿ 3.04 ಕೋಟಿ ರೂ. ಅನುದಾನವನ್ನು ಒದಗಿಸಿದೆ. ಹೊಸದುರ್ಗ ತಾಲ್ಲೂಕು ಅತಿ ಹೆಚ್ಚು ಬಾಧಿತವಾಗಿದ್ದು, ಶ್ರೀರಾಂಪುರ ಹೋಬಳಿಯಲ್ಲಿ ಈಗಾಗಲೆ ಮೊದಲ ಹಂತದ ಕಾರ್ಯಕ್ರಮ ಪ್ರಾರಂಭಗೊಂಡಿದೆ. ಇಲ್ಲಿ 500 ಹೆ. ನಲ್ಲಿ ಕಪ್ಪು ತಲೆ ಹುಳುವಿನ ಬಾಧೆಯಿಂದ ಸಂಪೂರ್ಣವಾಗಿ ಹಾಳಾಗಿರುವ ತೆಂಗಿನ ಗಿಡವನ್ನು ತೆರವುಗೊಳಿಸಿ, ಹೊಸ ಗಿಡ ನೆಡಲು ಪ್ರತಿ ಗಿಡಕ್ಕೆ ಒಂದು ಸಾವಿರ ರೂ. ನಂತೆ ಪ್ರತಿ ಹೆಕ್ಟೇರ್‌ಗೆ 32 ಗಿಡದಂತೆ ಗರಿಷ್ಟ 32 ಸಾವಿರ ರೂ. ನೀಡಲು ಅವಕಾಶ ಕಲ್ಪಿಸಲಾಗಿದೆ. ಹೊಸದುರ್ಗ ತಾಲ್ಲೂಕಿಗೆ 223 ಲಕ್ಷ ರೂ. ಅನುದಾನವನ್ನು ಸರ್ಕಾರ ಬಿಡುಗಡೆ ಮಾಡಿದೆ. ಹಿರಿಯೂರು ತಾಲ್ಲೂಕಿನಲ್ಲಿ 352 ಹೆ. ನಲ್ಲಿನ ತೆಂಗು ಪುನಶ್ಚೇತನಕ್ಕೆ 61.60 ಲಕ್ಷ ರೂ. ಮತ್ತು ಹೊಳಲ್ಕೆರೆ ತಾಲ್ಲೂಕಿನಲ್ಲಿ 100 ಹೆ. ಗಾಗಿ 17.50 ಲಕ್ಷ ರೂ. ಅನುದಾನವನ್ನು ಸರ್ಕಾರ ಒದಗಿಸಿದ್ದು, ಹಿರಿಯೂರು ತಾಲ್ಲೂಕಿನ ಜವಗೊಂಡನಹಳ್ಳಿ ಹಾಗೂ ಹೊಳಲ್ಕೆರೆ ತಾಲ್ಲೂಕಿನ ರಾಮಗಿರಿ ಹೋಬಳಿಯಲ್ಲಿ ಮೊದಲ ಹಂತದಲ್ಲಿ ಪುನಶ್ಚೇತನ ಕಾರ್ಯ ಆರಂಭಿಸಬೇಕಾಗಿದೆ. ಈ ತಾಲ್ಲೂಕುಗಳಲ್ಲಿ ರೈತರಿಗೆ ತೆಂಗು ಪುನಶ್ಚೇತನಕ್ಕೆ ಔಷಧಿ, ಗೊಬ್ಬರ ಪರಿಕರವನ್ನು ಉಚಿತವಾಗಿ ನೀಡಿ, ರೈತರಿಗೆ ತಜ್ಞರಿಂದ ತರಬೇತಿ ಮತ್ತು ಪ್ರಾತ್ಯಕ್ಷಿಕೆ ನೀಡಲಾಗುವುದು ಎಂದು ತೋಟಗಾರಿಕೆ ಉಪನಿರ್ದೇಶಕಿ ಸವಿತಾ ಮಾಹಿತಿ ನೀಡಿದರು. ಕಾರ್ಯಕ್ರಮವನ್ನು ಸಮರ್ಪಕವಾಗಿ ಶೀಘ್ರ ಅನುಷ್ಠಾನಗೊಳಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವರು ಸೂಚನೆ ನೀಡಿದರು.

### 13000 ಮೇವಿನ ಕಿಟ್ ಪೂರೈಕೆ

ಬರ ಪರಿಸ್ಥಿತಿ ನಿರ್ವಹಣೆಗಾಗಿ ಮೇವು ಬೆಳೆವುದನ್ನು ಉತ್ತೇಜಿಸಲು ಈಗಾಗಲೆ ಜಿಲ್ಲೆಗೆ 13 ಸಾವಿರ ಮೇವಿನ ಬೀಜದ ಕಿಟ್ ಪೂರೈಕೆಯಾಗಿದೆ. ಈ ಪೈಕಿ ಈಗಾಗಲೆ ಮೊಳಕಾಲ್ಮೂರು ತಾಲ್ಲೂಕಿಗೆ 968, ಚಳ್ಳಕೆರೆ–1019 ಹಾಗೂ ಚಿತ್ರದುರ್ಗ ತಾಲ್ಲೂಕಿನಲ್ಲಿ 1310 ಮೇವಿನ ಕಿಟ್‌ಗಳನ್ನು ಪೂರೈಕೆ ಮಾಡಲಾಗಿದೆ. ಉಳಿದೆಡೆಯೂ ಅಗತ್ಯಕ್ಕನುಗುಣವಾಗಿ ಶೀಘ್ರ ಮೇವಿನ ಬೀಜದ ಕಿಟ್ ಪೂರೈಕೆ ಮಾಡಲಾಗುವುದು. ಬೋರ್‌ವೆಲ್ ಹೊಂದಿರುವವರು,ನೀರಿನಸೌಲಭ್ಯ ಇರುವ ರೈತರಿಂದ ಮೇವಿನ ಬೀಜಕ್ಕೆ ಬೇಡಿಕೆ ಬರುತ್ತಿದೆ ಎಂದು ಪಶುಸಂಗೋಪನೆ ಇಲಾಖೆ ಉಪನಿರ್ದೇಶಕರು ಡಾ. ಬಾಬು ರತ್ನ ಹೇಳಿದರು.

## ಪ್ರಮುಖ ಸುದ್ದಿ

# ಬರ ನಿರ್ವಹಣೆಯಲ್ಲಿ ಸರ್ಕಾರ ವಿಫಲ



» **ಚಿತ್ರದುರ್ಗ**

ರಾಜ್ಯದಲ್ಲಿ ಬರ ಆವರಿಸಿದ್ದು ಇದರ ಪರಿಹಾರಕ್ಕೆ ರಾಜ್ಯ ಸರ್ಕಾರ ಮುಂದಾಗಿಲ್ಲ, ಇದರ ಬದಲು ಆಧಿಕಾರಕ್ಕಾಗಿ ಕಿತ್ತಾಟವನ್ನು ನಡೆಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯರವರಿಗೆ ತಮ್ಮ ಸ್ಥಾನ ಉಳಿಸಿಕೊಳ್ಳುವ ಚಿಂತೆಯಾದರೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರವರಿಗೆ ಮುಂದೆ ಯಾವ ರೀತಿ ಮುಖ್ಯಮಂತ್ರಿಯಾಗಬೇಕೆಂಬುದರ ಬಗ್ಗೆ ಚಿಂತೆ ಮಾಡುತ್ತಿದ್ದಾರೆ ಯಾರಿಗೂ ಸಹಾ ರಾಜ್ಯದ ರೈತರ, ಜನರ ಬಗ್ಗೆ ಕಾಳಜಿ ಇಲ್ಲ ಎಂದು ವಿಧಾನಸಭೆಯ ಮಾಜಿ ಸಭಾಪತಿ ವಿಶ್ವೇಶ್ವರಹೆಗಡೆಕಾಗೇರಿರಾಜ್ಯಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ಚಿತ್ರದುರ್ಗ ನಗರದ ಪ್ರವಾಸಿ ಮಂದಿರಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಪೂರ್ಣ ಪ್ರಮಾಣದಲ್ಲಿ ಬರ ಆವರಿಸಿದೆ. ಮಳೆಯ ಪ್ರಮಾಣ ಕಡಿಮೆಯಾಗಿದೆ ಇದರಿಂದ ಬೆಳೆಗಳು ಬಂದಿಲ್ಲ, ಈ ಹಿನ್ನಲೆಯಲ್ಲಿ ರೈತ ಕಂಗಲಾಗಿದ್ದಾನೆ, ಮುಂದಿನ ಜೀವನ ಯಾವ ರೀತಿ ಎಂದು ಗೊಂದಲಕ್ಕೆ ಈಡಾಗಿದ್ದಾನೆ ಇದರ ಬಗ್ಗೆ ರಾಜ್ಯ ಸರ್ಕಾರದ ಚುನಾಯಿತ ಪ್ರತಿನಿಧಿಗಳ ಕಾಳಜಿ ಇಲ್ಲ ಇದರೊಂದಿಗೆ ಅಧಿಕಾರಿಗಳು ಸಹಾ ಆರಾಮಾಗಿ ಇದ್ದಾರೆ. ರಾಜ್ಯದಲ್ಲಿ ಬರ ಆವರಿಸಿದೆ ಇದರೊಂದಿಗೆ ವಿದ್ಯುತ್ ಸಹಾ ಸಿಗದಂತ ಪರಿಸ್ಥಿತಿ ನಿರ್ಮಾಣವಾಗಿದೆ, ರೈತನಿಗೆ ರಾತ್ರಿ ಸಮಯದಲ್ಲಿ ವಿದ್ಯುತ್ ನೀಡುತ್ತಾರೆ ಈ ಸಮಯದಲ್ಲಿ ನೀರನ್ನು ಹಾಯಿಸಲು ಹೋಗಿ ಹಲವಾರು ಮಂದಿ ಸಂತೇಬೆನ್ನೂರಿನಲ್ಲಿ ವಿವಿಧ ವಿಷ ಜಂತುಗಳಿಂದ ಕಡಿಸಿಕೊಂಡು ಚಿಕಿತ್ಸೆಯನ್ನು ಪಡೆಯುತ್ತಿದ್ದಾರೆ. ಇದರಲ್ಲಿ ಇಬ್ಬರು ಸಾವನ್ನಪ್ಪಿದ್ದಾರೆ ಎಂದು ಸರ್ಕಾರದ ಕಾರ್ಯವೈಖರಿಯನ್ನು ಟೀಕಿಸಿದರು.

ರಾಜ್ಯದೆಲ್ಲೇಡೆ ಭೀಕರ ಬರಗಾಲ ತಾಂಡವ ಆಡುತ್ತಿದೆ. ಇದರ ಬಗ್ಗೆ ಪ್ರವಾಸ ಮಾಡಿ ರೈತರ ಸಮಸ್ಯೆಗಳನ್ನು ಆಲಿಸಿ ಪರಿಹಾರ ನೀಡುವುದನ್ನು ಬಿಟ್ಟು ಪ್ರತಿಯೊಂದಕ್ಕೂ ಕೇಂದ್ರ ಸರ್ಕಾರ ನಮಗೆ ಸ್ಪಂದಿಸುತ್ತಿಲ್ಲ, ಹಣ ನೀಡುತ್ತಿಲ್ಲ ಎಂದು ಆರೋಪಿಸುವ ಕೆಲಸ ಮಾಡುವುದಾದರೆ, 6.5 ಕೋಟಿ ಜನರಿಂದ ಆಯ್ಕೆಯಾಗಿ ರಾಜ್ಯದಲ್ಲಿ ಸರ್ಕಾರ ನಡೆಸುತ್ತಿರುವ ಕಾಂಗ್ರೆಸ್ ನವರು ಏನು ಮಾಡುತ್ತಿದ್ದಾರೆ ಎಂದು ಪ್ರಶ್ನಿಸಿ ರಾಜ್ಯದ 31 ಜಿಲ್ಲೆಗಳಲ್ಲಿ ಭೀಕರ ಬರ ಪರಿಸ್ಥಿತಿ ಆವರಿಸಿದ್ದು, ಇದನ್ನು ಸಮರ್ಕಪಕವಾಗಿ ನಿಭಾಯಿಸುವಲ್ಲಿ ಸಂಪೂರ್ಣ ಹಳಿ ತಪ್ಪಿರುವ ಕಾಂಗ್ರೆಸ್ ಸರ್ಕಾರ, ರೈತರ ಸಮಸ್ಯೆಗಳನ್ನು ಆಲಿಸದೆ ಅಧಿಕಾರಕ್ಕಾಗಿ ದಿನನಿತ್ಯ ಬಡಿದಾಟ ಮಾಡುತ್ತಿದೆ. ಸಚಿವರು ಕೇವಲ ಅಧಿಕಾರ ಹಂಚಿಕೆಯ ಚಿಂತನೆಯಲ್ಲೇ ತೊಡಗಿದ್ದಾರೆ ಎಂದು ದೂರಿದರು.

ರಾಜ್ಯ ಸರ್ಕಾರ ಬರದಲ್ಲಿ ತನ್ನ ಪಾಲನ್ನು ಬಿಡುಗಡೆ ಮಾಡುವುದನ್ನು ಬಿಟ್ಟು ಕೇಂದ್ರ ಸರ್ಕಾರದ ಕಡೆಗೆ ಕೈ ತೋರಿಸುತ್ತಿದ್ದಾರೆ. ಕೇಂದ್ರ ಸರ್ಕಾರ ಏನು ಮಾಡಿಲ್ಲ ಏನು ಮಾಡಿಲ್ಲ ಎಂದು ಜನತೆಯ ದಾರಿಯನ್ನು ತಪ್ಪಿಸುವ ಕಾರ್ಯವನ್ನು ಮಾಡುತ್ತಿದ್ದಾರೆ, ಇವರನ್ನು ಆಯ್ಕೆ ಮಾಡಿದ ಮತದಾರರಿಗೆ ಇವರ ಸರ್ಕಾರದಿಂದ ಬರ ಸಂಬಂಧ ಏನು ಮಾಡಿದ್ದಾರೆ, ಯಾವ ಸಚಿವರು ಪ್ರವಾಸವನ್ನು ಮಾಡಿದ್ದಾರೆ ಎಂಬುದನ್ನು ತೋರಿಸಲಿ ಎಂದ ಕಾಗೇರಿಯವರು, ಬರದ ಹಿನ್ನಲೆಯಲ್ಲಿ ಕೇಂದ್ರ ಸರ್ಕಾರ ನೀಡುವುದನ್ನು ಮುಂದಿನ ದಿನದಲ್ಲಿ ನೀಡುತ್ತದೆ ಆದರೆ ರಾಜ್ಯ ಸರ್ಕಾರವಾಗಿ ಏನು ಸಹಾ ಮಾಡಿಲ್ಲ ನಾವು ಪ್ರವಾಸವನ್ನು ಕೈಗೊಂಡ ಮೇಲೆ ಸರ್ಕಾರ ಜಿಲ್ಲಾವಾರು ಹಣವನ್ನು ಬಿಡುಗಡೆ ಮಾಡಿದೆ ಎಂಬ ಮಾಹಿತಿ ಬಂದಿದೆ ಎಂದು ಕಾಗೇರಿ ತಿಳಿಸಿದರು.

ಬರದಿಂದಾಗಿ ಜನ ಮತ್ತುನ ಜಾನುವಾರುಗಳಿಗೆ ತುಂಬಾ ತೊಂದರೆಯಾಗಿದೆ ಕುಡಿಯುವ ನೀರು, ಮೇವಿನ ಕೂರತೆಯಾಗಿದೆ. ಸರ್ಕಾರ ಬರಗಾಲದ ಗರಬೀರತೆಯನ್ನು ಪರಿಗಣಿಸಿಲ್ಲ, ಸದಾ ಅಧಿಕಾರದ ಹಂಚಿಕೆಯಲ್ಲಿ ಕಾಲ ಕಳೆಯುತ್ತಿದೆ. ರೈತರ ಪೆರವಾಗಿ ಬಿಜೆಪಿ ಕೆಲಸವನ್ನು ಮಾಡುತ್ತಿದೆ ಸದನದ ಒಳಗಡೆ ಮತ್ತು ಹೂರಗಡೆಯಲ್ಲಿಯೂ ಸಹಾ ಅವರ ಪರವಾಗಿ ನಿಲ್ಲುವ ಕಾರ್ಯವನ್ನು ಮಾಡುತದೆ. ಬೆಳಗಾವಿಯಲ್ಲಿ ನಡೆಯುವ ಅಧಿವೇಶನದಲ್ಲಿ ಇದರ ಬಗ್ಗೆ ಧ್ವನಿಯನ್ನು ಎತ್ತಲಾಗುವುದು ಅಲ್ಲದೆ ಸದ್ನದ ಹೂರಗಡೆಯೂ ಸಹಾ ಕೆಲಸವನ್ನು ಮಾಡಲಾಗುತ್ತದೆ ರೈತರ ಪರವಾಗಿ ಬಿಜೆಪಿ ಇದೆ ಎಂಬದನ್ನು ಮರೆಯಬೇಡಿ ಎಂದರು.

ಪತ್ರಿಕಾಗೋಷ್ಠಿಯಲ್ಲಿ ದಾವಣಗೆರೆ ಸಂಸದ ಜಿ.ಎಂ.ಸಿದ್ದೇಶ್ವರ್, ಶಾಸಕ ಎಂ.ಚಂದ್ರಪ್ಪ, ಬಿ.ಪಿ.ಹರೀಶ್,ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್, ಮಾಜಿ ಶಾಸಕ ಜಿ.ಹೆಚ್. ತಿಪ್ಪಾರೆಡ್ಡಿ ಬಿಜೆಪಿ ಜಿಲ್ಲಾದ್ಯಕ್ಷ ಮುರುಳಿ, ಯುವ ಮುಖಂಡ ಅನಿತ್ ಕುಮಾರ್ ಉಪಸ್ಥಿತರಿದ್ದರು.




## ಫಾಸ್ಟ್ ನ್ಯೂಸ್

### ದೌರ್ಜನ್ಯ ತಡೆಗೆ ಕ್ರಮ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕುಂದುಕೊರತೆ ಸಭೆ



» **ದಾವಣಗೆರೆ**

ಜಿಲ್ಲೆಯಲ್ಲಿ ದಲಿತರ ಮೇಲಾಗುವ ಯಾವುದೇ ರೀತಿಯ ದೌರ್ಜನ್ಯ ಪ್ರಕರಣಗಳು ವರದಿಯಾದ ಕೂಡಲೇ ಅಧಿಕಾರಿಗಳು ಎಚ್ಚೆತ್ತುಕೊಂಡು, ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಆರೋಪಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಅಧಿಕಾರಿಗಳಿಗೆ ಸೂಚಿಸಿದರು. ಮಂಗಳವಾರ ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ನಡೆದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕುಂದುಕೊರತೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ದೌರ್ಜನ್ಯ ಪ್ರಕರಣಗಳು ಸಂಭವಿಸಿದ ಕೂಡಲೇ ಇದನ್ನು ಗಂಭೀರವಾಗಿ ಪರಿಗಣಿಸುವ ಮೂಲಕ ಆ ಪ್ರಕರಣಗಳ ಚಾರ್ಜ್‌ಶೀಟ್ ಹಾಕಬೇಕು. ಮುಂದೆ ಇಂತಹ ಪ್ರಕರಣಗಳು ನಡೆಯದಂತೆ ಕ್ರಮ ಕೈಗೊಳ್ಳಬೇಕು ಎಂದರು.ಸಭೆಯಲ್ಲಿ ಭಾಗವಹಿಸಿದ ಡಿ.ಎಸ್.ಎಸ್ ಪ್ರತಿನಿಧಿಗಳು ಮಾತಾನಾಡಿ ತಾಲ್ಲೂಕು ಮಟ್ಟದಲ್ಲಿ ಪ್ರತಿ ಮೂರು ತಿಂಗಳಿಗೊಮ್ಮೆ ಎಸ್.ಸಿ, ಎಸ್.ಟಿ ಕುಂದುಕೊರತೆ ಸಭೆ ನಡೆಸಬೇಕು, ಸಮಾಜ ಕಲ್ಯಾಣ ಅಧಿಕಾರಿಗಳು ಸಹ ಶೋಷಣೆ ದೌರ್ಜನ್ಯಕ್ಕೆ ಒಳಗಾಗದ ಮನೆಗೆ ಭೇಟಿ ನೀಡಿ ತ್ವರಿತ ಗತಿಯಲ್ಲಿ ನ್ಯಾಯ ಒದಗಿಸಬೇಕು ಎಂದರು.ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಜಯಕುಮಾರ್ ಸಂತೋಷ್, ಮಹಾನಗರ ಪಾಲಿಕೆ ಆಯುಕ್ತೆ ರೇಣುಕಾ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಕೆ. ನಾಗರಾಜ, ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ಪಿ. ರಮೇಶ್ ಉಪಸ್ಥಿತರಿದ್ದರು.

### ಮಳೆ ವರದಿ: ಇಕ್ಕನೂರಿನಲ್ಲಿ 88.8 ಮಿ.ಮೀ ಮಳೆ

» **ಚಿತ್ರದುರ್ಗ**

ಸೋಮವಾರ ಸುರಿದ ಮಳೆಯ ವಿವರದನ್ವಯ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಇಕ್ಕನೂರಿನಲ್ಲಿ 88.8 ಮಿ.ಮೀ ಮಳೆಯಾಗಿದೆ. ಇದು ಜಿಲ್ಲೆಯ ಅತ್ಯಧಿಕ ಮಳೆಯಾಗಿದೆ.ಹಿರಿಯೂರು ತಾಲ್ಲೂಕಿನ ಹಿರಿಯೂರಿನಲ್ಲಿ 38.6 ಮಿ.ಮೀ, ಈಶ್ವರಗೆರೆ 66.2 ಮಿ.ಮೀ, ಬಾಬೂರು 30.8 ಮಿ.ಮೀ, ಸುಗೂರು 64.3 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗ-1ರಲ್ಲಿ 41.6 ಮಿ.ಮೀ, ಚಿತ್ರದುರ್ಗ-2ರಲ್ಲಿ 36.7 ಮಿ.ಮೀ, ಐನಹಳ್ಳಿ 25.2 ಮಿ.ಮೀ, ಭರಮಸಾಗರ 22 ಮಿ.ಮೀ, ತುರುವನೂರು 49.4 ಮಿ.ಮೀ, ಸಿರಿಗೆರೆ 10 ಮಿ.ಮೀ, ಹಿರೇಗುಂಟನೂರು 5 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 44.6 ಮಿ.ಮೀ, ಬಾಗೂರು 10.5 ಮಿ.ಮೀ, ಮತ್ತೋಡು 20.4 ಮಿ.ಮೀ, ಶ್ರೀರಾಂಪುರ 45 ಮಿ.ಮೀ, ಮಾಡದಕೆರೆ 34.2 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 13.6 ಮಿ.ಮೀ, ಚಿಕ್ಕಜಾಜೂರು 4.2 ಮಿ.ಮೀ, ಬಿ. ದುರ್ಗ 11 ಮಿ.ಮೀ, ತಾಳ್ಯ 12.4 ಮಿ.ಮೀ, ರಾಮಗಿರಿ 4.2 ಮಿ.ಮೀ. ಹೆಚ್‌ಡಿ ಪುರ 21.4 ಮಿ.ಮೀ ಮಳೆಯಾಗಿದೆ. ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 29.6 ಮಿ.ಮೀ, ಪರುಶುರಾಂಪುರ 2.2 ಮಿ.ಮೀ, ನಾಯಕನಹಟ್ಟಿ 23.2 ಮಿ.ಮೀ, ತಳಕು 28.4 ಮಿ.ಮೀ, ಡಿ.ಮರಿಕುಂಟೆ 29.3 ಮಳೆಯಾಗಿದೆ. ಮೊಳಕಾಲ್ಮೂರು ತಾಲ್ಲೂಕಿನ ಮೊಳಕಾಲ್ಮೂರಿನಲ್ಲಿ 0.2 ಮಿ.ಮೀ, ರಾಯಾಪುರ 5.8 ಮಿ.ಮೀ, ಬಿಜಿಕೆರೆ 5 ಮಿ.ಮೀ ಮಳೆಯಾಗಿದೆ.

**10 ಮನೆಗಳು ಭಾಗಶಃ ಹಾನಿ:** ಸೋಮವಾರ ಸುರಿದ ಮಳೆಗೆ ಜಿಲ್ಲೆಯಾದ್ಯಂತ ಒಟ್ಟು 10 ಮನೆಗಳು ಭಾಗಶಃ ಹಾನಿಯಾಗಿದೆ. ಚಿತ್ರದುರ್ಗ ತಾಲ್ಲೂಕಿನಲ್ಲಿ 2 ಮನೆಗಳು ಭಾಗಶಃ ಹಾನಿಯಾಗಿದೆ. ಹೊಳಲ್ಕೆರೆ ತಾಲ್ಲೂಕಿನಲ್ಲಿ 3 ಮನೆ ಭಾಗಶಃ ಹಾನಿಯಾಗಿದೆ. ಹಿರಿಯೂರು ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ ತಲಾ 1 ಮನೆ ಭಾಗಶಃ ಹಾನಿಯಾಗಿದೆ. ಹೊಸದುರ್ಗ ತಾಲ್ಲೂಕಿನಲ್ಲಿ 3 ಮನೆ ಭಾಗಶಃ ಹಾನಿಯಾಗಿದೆ ಎಂದು ಜಿಲ್ಲಾಧಿಕಾರಿ ಕಚೇರಿ ಪ್ರಕಟಣೆ ತಿಳಿಸಿದೆ.

### ಕ್ರೀಡಾ ಪ್ರಶಸ್ತಿಗಾಗಿ ಅರ್ಜಿ

» **ಶಿವಮೊಗ್ಗ**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು 2023 ನೇ ಸಾಲಿನ ಮೇಜರ್ ಧ್ಯಾನ್‌ಚಂದ್ ಖೇಲ್ ರತ್ನ ಪ್ರಶಸ್ತಿ, ಅರ್ಜುನ ಪ್ರಶಸ್ತಿ, ದ್ರೋಣಾಚಾರ್ಯ ಪ್ರಶಸ್ತಿ, ಧ್ಯಾನ್‌ಚಂದ್ ಪ್ರಶಸ್ತಿ, ರಾಷ್ಟ್ರೀಯ ಖೇಲ್ ರತ್ನ ಪುರಸ್ಕಾರ ಮತ್ತು ಮೌಲಾನ ಅಬ್ದುಲ್ ಕಲಾಂ ಆಜಾದ್ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಪ್ರಶಸ್ತಿಗಳನ್ನು ಕ್ರೀಡಾ ಅಭಿವೃದ್ಧಿ ಕ್ಷೇತ್ರದಲ್ಲಿ ಕ್ರೀಡಾಪಟುಗಳು, ತರಬೇತುದಾರರು, ಘಟಕಗಳು ಮತ್ತು ವಿಶ್ವವಿದ್ಯಾಲಯಗಳಿಗೆ ನೀಡಲಾಗುತ್ತಿದ್ದು, ಅರ್ಹ ಕ್ರೀಡಾಪಟುಗಳಿಂದ 2023ರ ರಾಷ್ಟ್ರೀಯ ಕ್ರೀಡಾ ಪ್ರಶಸ್ತಿಗಾಗಿ ಸಚಿವಾಲಯವು ಆನ್‌ಲೈನ್ ಅರ್ಜಿಗಳನ್ನು ಆಹ್ವಾನಿಸಿದೆ.

### ಪೂರ್ವಭಾವಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ

# ವಿಜೃಂಭಣೆಯಿಂದ ಓಬವ್ವ ಜಯಂತಿ ಆಚರಿಸೋಣ

» **ಚಿತ್ರದುರ್ಗ**

ಜಿಲ್ಲಾಡಳಿತದವತಿಯಿಂದಇದೇನವೆಂಬರ್ 11ರಂದು ಜಿಲ್ಲಾ ಕೇಂದ್ರದಲ್ಲಿ ಒನಕೆ ಓಬವ್ವ ಜಯಂತಿಯನ್ನು ವಿಜೃಂಭಣೆಯಿಂದ ಅರ್ಥಪೂರ್ಣವಾಗಿ ಆಚರಿಸುವ ನಿಟ್ಟಿನಲ್ಲಿ ಅಗತ್ಯ ಪೂರ್ವಸಿದ್ಧತೆ ಕೈಗೊಳ್ಳಬೇಕು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಒನಕೆ ಓಬವ್ವ ಜಯಂತಿ ಆಚರಿಸುವ ಸಂಬಂಧ ಅಗತ್ಯ ಪೂರ್ವಸಿದ್ಧತೆ ಕೈಗೊಳ್ಳುವ ಬಗ್ಗೆ ಚರ್ಚಿಸಲು ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಒನಕೆ ಓಬವ್ವ ಜಯಂತಿ ಅಂಗವಾಗಿ ನವೆಂಬರ್ 11ರಂದು ಬೆಳಿಗ್ಗೆ 9ಕ್ಕೆ ಐತಿಹಾಸಿಕ ಕೋಟೆ ಮುಂಭಾಗದಿಂದ ಒನಕೆ ಓಬವ್ವ ಭಾವಚಿತ್ರದ ಮೆರವಣಿಗೆಯು ಪ್ರಾರಂಭವಾಗಿ ಆನೆಬಾಗಿಲು ಮೂಲಕ, ಗಾಂಧಿವೃತ್ತ, ಒನಕೆ ಓಬವ್ವ ವೃತ್ತ, ಮದಕರಿ ನಾಯಕ ವೃತ್ತದ ಮೂಲಕ ತರಾಸು ರಂಗಮಂದಿರ ತಲುಪಲಿದೆ. ಮೆರವಣಿಗೆಯಲ್ಲಿ ವಿವಿಧ ಜಾನಪದ ಕಲಾತಂಡಗಳು ಭಾಗವಹಿಸಲಿವೆ. ಬೆಳಿಗ್ಗೆ 11ಕ್ಕೆ ನಗರದ ತರಾಸು ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು, ಎಲ್ಲ ಸಮಾಜದವರು ಪಾಲ್ಗೊಳ್ಳಬೇಕು ಎಂದರು. ಸರ್ಕಾರದ ಶಿಷ್ಟಾಚಾರದ ಅನುಸಾರ ಆಹ್ವಾನ ಪತ್ರಿಕೆ ಮುದ್ರಿಸಿ, ಜನಪ್ರತಿನಿಧಿಗಳನ್ನು ಜಯಂತಿಗೆ ಆಹ್ವಾನಿಸಲಾಗುವುದು. ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸ ಹಾಗೂ ಗೀತಗಾಯನ ಕಾರ್ಯಕ್ರಮ ಆಯೋಜಿಲಾಗುವುದು. ಜಯಂತಿ ಅಂಗವಾಗಿ ಎಲ್ಲ ಪ್ರತಿಮೆಗಳಿಗೆ ಅಲಂಕಾರ ಮಾಡಬೇಕು. ಒಂದು ದಿನ ಮುಂಚಿತವಾಗಿ ಒನಕೆ ಓಬವ್ವ ಪ್ರತಿಮೆಗೆ ವಿದ್ಯುತ್ ಅಲಂಕಾರ ಹಾಗೂ ಪುಷ್ಪಾಲಂಕಾರ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.



ಜಯಂತಿ ಕಾರ್ಯಕ್ರಮಕ್ಕೆ ಶಾಲಾ-ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಬೇಕು. ಈ ಕುರಿತು ಶಾಲಾ ಶಿಕ್ಷಣ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಅಗತ್ಯ ಕ್ರಮವಹಿಸಬೇಕು.

ಮಹಿಳೆಯರಿಂದ ಪೂರ್ಣಕುಂಭ ಮೆರವಣಿಗೆಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳು ವ್ಯವಸ್ಥೆ ಮಾಡಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ತಿಳಿಸಿದರು.

ಛಲವಾದಿ ಮಹಾಸಂಸ್ಥಾನ ಗುರುಪೀಠ ಟ್ರಸ್ಟ್‌ನ ಬಸವ ನಾಗಿದೇವ ಸ್ವಾಮೀಜಿ ಮಾತನಾಡಿ, ಜಿಲ್ಲಾಡಳಿತದ ವತಿಯಿಂದ ಒನಕೆ ಓಬವ್ವ ಜಯಂತಿ ಆಚರಣೆಯ ನಂತರ ರಾಜ್ಯಮಟ್ಟದ ಒನಕೆ ಓಬವ್ವ ಜಯಂತಿ ಕಾರ್ಯಕ್ರಮ ಆಯೋಜಿಸುವ ಚಿಂತನೆ ಇದೆ ಎಂದು ತಿಳಿಸಿದ ಅವರು, ಜಿಲ್ಲಾ ಹಾಗೂ ತಾಲ್ಲೂಕುಮಟ್ಟದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಉತ್ತಮವಾಗಿ ಸಾಧನೆ ತೋರಿದ ಮಹಿಳೆಯರನ್ನು ಜಾತ್ಯಾತೀತವಾಗಿ ಗುರುತಿಸಿ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದರು.

ದಾವಣಗೆರೆ ವಿಶ್ವವಿದ್ಯಾಲಯ ವಿದ್ಯಾವಿಷಯಕ ಪರಿಷತ್ ಸದಸ್ಯೆ ಎನ್.ಬಿ.ಭಾರ್ಗವಿ ದ್ರಾವಿಡ್ ಮಾತನಾಡಿ, ಇಂದಿನ ಯುವ ಜನತೆಗೆ ಇತಿಹಾಸ ತಿಳಿಸುವ ಕೆಲಸವಾಗಬೇಕಿದೆ. ಕಾಲೇಜು ವಿದ್ಯಾರ್ಥಿಗಳನ್ನು ಜಯಂತಿ ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಲು ಅಗತ್ಯಕ್ರಮವಹಿಸಬೇಕು ಎಂದು ಸಲಹೆ ನೀಡಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಛಲವಾದಿ ಸಮಾಜದ ಮುಖಂಡರಾದ ಹೆಚ್.ಸಿ.ನಿರಂಜನ ಮೂರ್ತಿ, ಹೆಚ್.ಶೇಷಣ್ಣ, ಎಸ್.ವಿ.ಗುರುಮೂರ್ತಿ, ಹೆಚ್.ಹಾಲಪ್ಪಸ್ವಾಮಿ, ಎಸ್.ಎನ್.ರವಿಕುಮಾರ್, ತಿಪ್ಪೇಸ್ವಾಮಿ, ಕೆ.ಸಿ.ಜಗದೀಶ್, ಅಣ್ಣಪ್ಪಸ್ವಾಮಿ, ಜಯರಾಮ್, ನವೀನ್, ಕಣಿವೆ ಮಾರಮ್ಮ ಸಂಘದ ತಿಪ್ಪೇಸ್ವಾಮಿ, ನಾಯಕ ಸಮಾಜದ ಸುರೇಶ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಮಾಜದ ಮುಖಂಡರು ಇದ್ದರು.

### ಜೋಗಿಮಟ್ಟಿ ಗೆಳೆಯರ ಬಳಗದ ನಡೆದು ಬಂದ ದಾರಿ ಪುಸ್ತಕ ಲೋಕಾರ್ಪಣೆ

# ನಾವು ನಿಮ್ಮ ಜೊತೆಗೂಡಿ ಕೈ ಜೋಡಿಸುತ್ತೇವೆ

» **ಚಿತ್ರದುರ್ಗ**

ಸಮಾಜದಲ್ಲಿ ನೂರೆಂಟು ಸಂಘಟನೆಗಳಿದ್ದು ಜೋಗಿಮಟ್ಟಿ ಗೆಳೆಯರ ಬಳಗ ಉತ್ತಮ ಕೆಲಸಗಳನ್ನು ಮಾಡುವ ಮೂಲಕ ನಾಡು-ನುಡಿ ಸೇವೆಯನ್ನೆ ಅಳವಡಿಸಿಕೊಳ್ಳುವ ಮೂಲಕ ಮಾಡುತ್ತಿರುವ ಸತ್ಕಾರ್ಯಗಳು ಮುಂದಿನ ದಿನಗಳಲ್ಲಿ ಇತಿಹಾಸ ಪುಟದಲ್ಲಿ ದಾಖಲಾಗುವ ಮೂಲಕ ಜಿಲ್ಲೆಯಲ್ಲಿ ಅತ್ಯುತ್ತಮ ಸಂಘಟನೆಯಾಗಿ ಬೆಳೆಯಲಿ ಎಂದು ಮುರುಘಾ ಮಠದ ಉಸ್ತುವಾರಿ ಶ್ರೀಗಳಾದ ಶ್ರೀ ಬಸವಪ್ರಭು ಸ್ವಾಮೀಜಿಗಳು ಆಶಿಸಿದರು.

ಚಿತ್ರದುರ್ಗ ನಗರದ ಮುರುಘಾ ಮಠದ ಸಭಾಂಗಣದಲ್ಲಿ ದಿನಾಂಕ 7-11-2023 ರ ಮಂಗಳವಾರ ಹಮ್ಮಿಕೊಂಡಿದ್ದ ಜೋಗಿಮಟ್ಟಿ ಗೆಳೆಯರ ಬಳಗದ "ನಡೆದು ಬಂದ ದಾರಿ" ಎಂಬ ಕಾಯಕ ಕೃತಿ ಲೋಕಾರ್ಪಣೆ ಮಾಡಿ ಮಾತನಾಡಿದರು. 8 ವರ್ಷಗಳಿಂದ ರಕ್ತದಾನ, ನೇತ್ರದಾನ, ಆರೋಗ್ಯ ತಪಾಸಣಾ ಶಿಬಿರ, ಮಕ್ಕಳಿಗೆ ಪುಸ್ತಕ ಪೆನ್ನು ಪ್ರೋತ್ಸಾಹ ಪುರಸ್ಕಾರ, ನಿರಾಶ್ರಿತರಿಗೆ ಚಿಕಿತ್ಸೆ, ಆಶ್ರಮ ಸೂರು, ಸಸಿ ನೆಡುವುದು, ಪರಿಸರ ಸಂರಕ್ಷಣೆ, ವನ್ಯ ಜೀವಿಗಳಿಗೆ ಹಣ್ಣು-ಹಂಪಲು ವಿತರಣೆ, ಇನ್ನೂ ಅನೇಕ ಸಮಾಜ ಮುಖಿ ಕೆಲಸಗಳ ನಡೆದು ಬಂದ ಪುಸ್ತಕ ತುಂಬಾ ಅರ್ಥಪೂರ್ಣವಾಗಿದೆ ಎಂದರು

ಇವರ ಸಾಮಾಜಿಕ ಸೇವೆಯಲ್ಲಿ ನಾವು ನಿಮ್ಮ ಜೊತೆಗೂಡಿ ಕೈ ಜೋಡಿಸುತ್ತೇವೆ, ಮಠದ ಆಶೀರ್ವಾದ ಸದಾ ನಿಮ್ಮ ಬಳಗದ ಮೇಲಿರುತ್ತದೆ, ನಿಮ್ಮಿಂದ ಇನ್ನೂ ಹೆಚ್ಚು ಕಾರ್ಯಗಳು ಸಮಾಜದಲ್ಲಿ ನಡೆಯಲಿ ಎಂದರು



ಕರ್ನಾಟಕ ರಾಜ್ಯ ಶಿಕ್ಷಣ ಪರಿಷತ್ ಜಿಲ್ಲಾಧ್ಯಕ್ಷ ಮಾಲತೇಶ್ ಅರಸ್ ಹರ್ತಿಕೋಟೆ ಮಾತನಾಡಿ ಜೋಗಿಮಟ್ಟಿ ಗೆಳೆಯರ ಬಳಗ ಉತ್ತಮ ಕೆಲಸ ಮಾಡುತ್ತಿದ್ದು ಸಂಘಟನೆಯ ಸೇವೆ ಚಿತ್ರದುರ್ಗದ ಮೂಲೆ ಮೂಲೆಗಳನ್ನು ತಲುಪಲಿ , ವಿದ್ಯಾರ್ಥಿಗಳಿಗೆ ಮಹಿಳೆಯರಿಗೆ , ವೃದ್ಧರಿಗೆ, ಶೋಷಿತರಿಗೆ ಮತ್ತು ದೀನ-ದಲಿತರಿಗೆ ಶಕ್ತಿ ತುಂಬುವ ಕೆಲಸಗಳನ್ನು ಮಾಡಲಿ. ಇವರ ಶ್ರಮ ವ್ಯರ್ಥವಾಗದೆ ಅನೇಕರಿಗೆ ಉಪಯೋಗವಾಗಬೇಕು ಎಂದರು

ಜೋಗಿಮಟ್ಟಿ ಗೆಳೆಯರ ಬಳಗದ ಅಧ್ಯಕ್ಷ ಎಸ್. ರಾಘವೇಂದ್ರ ಪ್ರಾಸ್ತಾವಿಕ ಮಾತನಾಡಿ 8-9 ವರ್ಷಗಳಿಂದ ತಮ್ಮದೇ ಆದ ರೀತಿಯಲ್ಲಿ ಸೇವೆ ಮಾಡುತ್ತ ಬಂದಿದ್ದು ಇದುವರೆಗೂ ಯಾವ ಪ್ರಚಾರ ಬಯಸದೆ ಸೇವಾ ಕಾಯಕದಲ್ಲಿ ನಿರಂತರ ಸೇವೆ ಮಾಡಿದ ಜೋಗಿಮಟ್ಟಿ ಗೆಳೆಯರ ಬಳಗ, ಅನೇಕ ಸಮಾಜಮುಖಿ ಕಾರ್ಯಕ್ರಮಗಳನ್ನು ಮಾಡಿದೆ, ಹಾಗಾಗಿ ಇದನ್ನು ಮನಗಂಡು ನಡೆದು ಬಂದ ದಾರಿ ಎಂಬ ಕಾಯಕ ಕೃತಿಯನ್ನು ಮುಂದಿನ ಪೀಳಿಗೆಗೆ ಅದು ಇತಿಹಾಸವಾಗಲೆಂದು ಮುದ್ರಿಸಲಾಗಿದೆ, ನಮ್ಮಿಂದ ಇನ್ನೂ ಸಮಾಜದಲ್ಲಿ ಮಾಡಬೇಕಾದ ಕಾರ್ಯಕ್ರಮಗಳು ತುಂಬಾ ಇವೆ, ಇಲ್ಲಿ ಮಾಡಿರುವುದು ಕೇವಲ ಸಾಸಿವೆಯಷ್ಟು , ಇನ್ನೂ ಮಾಡಬೇಕಿರುವುದು ಬೆಟ್ಟದಷ್ಟಿದೆ ಎಂದರು.

ಶ್ರಮಜೀವಿ ಕಟ್ಟಡ ಮತ್ತು ಕೂಲಿ ಕಾರ್ಮಿಕರ ಪಡೆಯ ರಾಜ್ಯಾಧ್ಯಕ್ಷರಾದ ಎನ್.ಮಲ್ಲಿಕಾರ್ಜುನ್ ಇಂತಹ ಸಂಘಟನೆಗಳಿಗೆ ಎಲ್ಲರ ಪ್ರೋತ್ಸಾಹ ಸಹಕಾರ ಅತ್ಯಗತ್ಯವಾಗಿದ್ದು ಇನ್ನು ಉತ್ತಮ ಕೆಲಸ ಮಾಡುವ ಮೂಲಕ ಬಸವಣ್ಣನವರು ಆ ಕಾಲಘಟ್ಟದಲ್ಲೆ ಈ ಮಾತುಗಳನ್ನ ನುಡಿದಿದ್ದರು

"ಮಾನವ ಜನ್ಮ ದೊಡ್ಡದಲ್ಲ... ಮಾನವೀಯತೆ ದೊಡ್ಡದು... ಧರ್ಮ ದೊಡ್ಡದಲ್ಲ... ದಯೆಯೆ ಜಗದಲಿ ದೊಡ್ಡದು" ಎಂದು ಹೇಳಿದ ಮಾತು ನಿಮ್ಮಂಥವರನ್ನು ನೋಡಿ ಹೇಳಿದ ಮಾತುಗಳಿರಬೇಕು ಎಂದರು

### ನ. 08 ರಿಂದ 11 ರವರೆಗೆ ದೀಪ ಸಂಜೀವಿನಿ ಕಾರ್ಯಕ್ರಮ

#### ಸ್ವ ಸಹಾಯ ಗುಂಪಿನ ಮಹಿಳೆಯರಿಂದ ತಯಾರಿತ ಉತ್ಪನ್ನಗಳ ಮಾರಾಟ

» **ಚಿತ್ರದುರ್ಗ**

ದೀಪಾವಳಿ ಹಬ್ಬದ ಅಂಗವಾಗಿ ಮಹಿಳೆಯರ ಸ್ವಾವಲಂಬಿ ನಡೆಗಳನ್ನು ಪ್ರೇರೇಪಿಸಲು ಇದೇ ನ. 08 ರಿಂದ 11 ರವರೆಗೆ ಸ್ವ ಸಹಾಯ ಗುಂಪಿನ ಮಹಿಳೆಯರು ತಯಾರಿಸಿರುವ ಮಣ್ಣಿನ ಹಣತೆಗಳು ಹಾಗೂ ಹಬ್ಬದ ವಿಶೇಷ ತಿಂಡಿ-ತಿನಿಸುಗಳ ಮಳಿಗೆಗಳನ್ನು ತೆರೆದು ದೀಪ ಸಂಜೀವಿನಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸೋಮಶೇಖರ್ ಅವರು ತಿಳಿಸಿದ್ದಾರೆ. ದೀಪಾವಳಿ ಹಬ್ಬವು ಪ್ರಸಿದ್ಧವಾದ ಹಬ್ಬವಾಗಿದ್ದು, ದೀಪಗಳಿಂದ ದೀಪಗಳನ್ನು ಹಚ್ಚುವ ಹಬ್ಬವೆ ಬೆಳಕಿನ ಹಬ್ಬ ದೀಪಾವಳಿ. ಈ ದೀಪಾವಳಿಯಲ್ಲಿ ನಮ್ಮ ಸ್ವ ಸಹಾಯ ಗುಂಪಿನ ಮಹಿಳೆಯರು ತಮ್ಮ ಕೈಚಳಕ, ಪರಿಶ್ರಮ ಹಾಗೂ ಸೃಜನಸೀಲತೆಯಿಂದ ತಯಾರಿಸಿದ ವಿವಿಧ ವಿನ್ಯಾಸದ ದೀಪಗಳನ್ನು ಬಳಸುವುದರ ಮೂಲಕ ಮಾರುಕಟ್ಟೆ ಒದಗಿಸುವುದು ಹಾಗೂ ಸ್ವದೇಶಿ ಉತ್ಪನ್ನಗಳನ್ನು ಬೆಂಬಲಿಸುವುದರ ಮೂಲಕ ಮಹಿಳೆಯರ ಸ್ವಾವಲಂಬಿ ನಡೆಗಳನ್ನು ಪ್ರೇರೇಪಿಸುವುದಕ್ಕಾಗಿ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ನ. 08 ರಿಂದ 11 ರವರೆಗೆ ಸ್ವ ಸಹಾಯ ಗುಂಪಿನ ಮಹಿಳೆಯರು ತಯಾರಿಸುವ ಮಣ್ಣಿನ ಹಣತೆಗಳು ಹಾಗೂ ಹಬ್ಬದ ವಿಶೇಷ ತಿಂಡಿ- ತಿನಿಸುಗಳ ಮಳಿಗೆಗಳನ್ನು ದೀಪಾವಳಿ ಹಬ್ಬದ ಪ್ರಯುಕ್ತ ದೀಪ ಸಂಜೀವಿನಿ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಇದರ ಅಂಗವಾಗಿ ನ. 09 ರಂದು ಚಿತ್ರದುರ್ಗದ ಗಾಂಧಿ ಸರ್ಕಲ್ ಬಳಿಯ ಉಪಾಧ್ಯಾಯ ಹೋಟೆಲ್ ಮುಂಭಾಗದಲ್ಲಿ ದೀಪ ಸಂಜೀವಿನಿ ಕಾರ್ಯಕ್ರಮ ಆಯೋಜಿಸಲಾಗಿದ್ದು, ಸಾರ್ವಜನಿಕರು ಈ ಕಾರ್ಯಕ್ರಮದ ಯಶಸ್ವಿಗೆ ಸಹಕರಿಸುವಂತೆ ಜಿ.ಪಂ. ಸಿಇಒ ಸೋಮಶೇಖರ್ ಮನವಿ ಮಾಡಿದ್ದಾರೆ.



**ರೈಫಲ್ ಕ್ಲಬ್‌ಗೆ ಭೇಟಿ ನೀಡಿ ನಾಗರೀಕ ಬಂದೂಕು ತರಬೇತಿ ಬಗ್ಗೆ ಪದಾಧಿಕಾರಿಗಳೊಂದಿಗೆ ಚರ್ಚಿಸಿ ಜಿಲ್ಲಾ ರಕ್ಷಣಾಧಿಕಾರಿ ಧರ್ಮೇಂದ್ರಕುಮಾರ್ ಮೀನಾ ಅವರಿಗೆ ಸನ್ಮಾನಿಸಲಾಯಿತು.**

### ಫಲಪುಷ್ಪ ಪ್ರದರ್ಶನ: ಸಾಂಸ್ಕೃತಿಕ ಕಾರ್ಯಕ್ರಮ

**ದಾವಣಗೆರೆ:** ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್ ಹಾಗೂ ತೋಟಗಾರಿಕೆ ಇಲಾಖೆಯಿಂದ ನವೆಂಬರ್ 13 ರಿಂದ 16 ರ ವರೆಗೆ ಗ್ಲಾಸ್ ಹೌಸ್‌ನಲ್ಲಿ ಫಲಪುಷ್ಪ ಪ್ರದರ್ಶನ ಏರ್ಪಡಿಸಲಾಗುತ್ತಿದ್ದು ಇಲ್ಲಿ ನ.13 ರಂದು ಸಂಜೆ ಲೇಸರ್, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ: ವೆಂಕಟೇಶ್ ಎಂ.ವಿ. ತಿಳಿಸಿದ್ದಾರೆ. ಫಲಪುಷ್ಪ ಪ್ರದರ್ಶನದ ಅಂಗವಾಗಿ ಸಂಜೆ ನಡೆಯುವ ಸಾಂಸ್ಕೃತಿಕ ಕಾರ್ಯಕ್ರಮಗಳ ವೀಕ್ಷಣೆಗಾಗಿ ಪ್ರವೇಶವು ಉಚಿತವಾಗಿರುತ್ತದೆ. ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ನೃತ್ಯ ರೂಪಕ, ಲೇಸರ್ ಶೋ, ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಫಲಪುಷ್ಪ ಪ್ರದರ್ಶನದಲ್ಲಿ ಚಂದ್ರಯಾನ-3, ವಿವಿಧ ಕಲಾತ್ಮಕ ಪುಷ್ಪಗಳ ಪ್ರದರ್ಶನ ಸೇರಿದಂತೆ ಔಷಧಗಿಡಗಳ ಪ್ರದರ್ಶನ, ಮೈಸೂರು ಸೇರಿದಂತೆ ವಿವಿಧ ಭಾಗಗಳ ತಿನಿಸುಗಳು ಇಲ್ಲಿರಲಿವೆ ಎಂದು ಅವರು ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ನೀರಿನ ಸಮಸ್ಯೆ ಆಗದಂತೆ ಕ್ರಮವಹಿಸಿ: ಸುಧಾಕರ್

» ಮೊದಲ ಪುಟದಿಂದ

ಜಿಲ್ಲಾ ಉಸ್ತುವಾರಿ ಸಚಿವರು ಮಾತನಾಡಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವತಿಯಿಂದ, ಗ್ರಾಮೀಣ ಪ್ರದೇಶಗಳಲ್ಲಿನ ಕುಡಿಯುವ ನೀರಿನ ಸ್ಥಿತಿ ಗತಿ ಬಗ್ಗೆ ಸೂಕ್ತ ಮಾಹಿತಿ ತಯಾರಿಸಿ, ಸಲ್ಲಿಸುವಂತೆ ಸೂಚನೆ ನೀಡಿದರು.

**ಆರ್‌ಓ ಘಟಕ ದುರಸ್ಥಿಗೊಳಿಸಿ:** ಶುದ್ಧ ಕುಡಿಯುವ ನೀರಿನ ಘಟಕಗಳನ್ನು ದುರಸ್ಥಿಗೊಳಿಸಿ, ಚಾಲನೆಗೊಳಿಸಬೇಕು ಎಂದು ಶಾಸಕ ಟಿ.ರಘುಮೂರ್ತಿ ಗ್ರಾಮೀಣ ಕುಡಿಯುವ ನೀರು ಸರಬರಾಜು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸಮರ್ಪಕವಾಗಿ ದುರಸ್ಥಿಗೊಳಿಸುತ್ತಿಲ್ಲ. ಎಲ್ಲ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ದುರಸ್ಥಿಗೊಳಿಸಿ, ಕಾರ್ಯಾರಂಭ ಮಾಡುವಂತೆ ಅಗತ್ಯ ಕ್ರಮವಹಿಸಬೇಕು ಎಂದು ತಾಕೀತು ಮಾಡಿದರು.

ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸಂಬಂಧಪಟ್ಟ ಏಜೆನ್ಸಿಯವರು ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡುತ್ತಿಲ್ಲ. ಸರಿಯಾಗಿ ನಿರ್ವಹಣೆ ಮಾಡದ ಏಜೆನ್ಸಿಯವರನ್ನು ಕಪ್ಪುಪಟ್ಟಿಗೆ ಸೇರಿಸಲಾಗಿದೆ ಎಂದು ಜಿ.ಪಂ ಸಿಇಒ ತಿಳಿಸಿದರು.



ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಮಾತನಾಡಿ, ಜಲಜೀವನ್ ಮಿಷನ್ ಯೋಜನೆಡಿಯಲ್ಲಿ ಬೋರ್‌ವೆಲ್ ಕೊರೆಸಲು ಅವಕಾಶವಿದೆ. ಅವಶ್ಯಕತೆ ಇರುವ ಕಡೆ ಖಚಿತಪಡಿಸಿಕೊಂಡು ಬೋರ್‌ವೆಲ್ ಕೊರೆಸಬಹುದು. ಹಾಗಾಗಿ ಬೋರ್‌ವೆಲ್ ಕೊರೆಸಲು ಅಗತ್ಯವಿರುವ ಗ್ರಾಮಗಳ ವಿವರವನ್ನು ತಯಾರಿಸಿ ಸಲ್ಲಿಸಲು ಸೂಚನೆ ನೀಡಿದರು.

**ಮೇವು ಮಾಹಿತಿ ನಿಖರವಾಗಿರಲಿ:** ಮಳೆ ಕೊರತೆ ಹಿನ್ನಲೆಯಲ್ಲಿ ಮೇವಿನ ಅಭಾವ ತೀವ್ರವಾಗುತ್ತಿದ್ದು, ಸದ್ಯ ಜಿಲ್ಲೆಯಲ್ಲಿ ಲಭ್ಯವಿರುವ ಮೇವಿನ ಪ್ರಮಾಣದ ವಾಸ್ತವಾಂಶದ ನಿಖರ ಮಾಹಿತಿಯನ್ನು ನೀಡುವಂತೆ ಜಿಲ್ಲಾ ಉಸ್ತುವಾರಿ ಸಚಿವರು ಪಶುಸಂಗೋಪನೆ ಇಲಾಖೆ ಉಪನಿರ್ದೇಶಕರಿಗೆ ತಾಕೀತು ಮಾಡಿದರು.

ಶಾಸಕ ಎಂ.ಚಂದ್ರಪ್ಪ ಮಾತನಾಡಿ, ಜಿಲ್ಲೆಯ ಮೇವಿನ ಪರಿಸ್ಥಿತಿಯ ವಾಸ್ತವಾಂಶ ಸಭೆಯ ಗಮನಕ್ಕೆ ತರಬೇಕು. ತಪ್ಪು ಮಾಹಿತಿ ನೀಡಬಾರದು. ಮೂಕ ಪ್ರಾಣಿಗಳನ್ನು ಗಮನದಲ್ಲಿಟ್ಟುಕೊಂಡು ಪ್ರಾಯೋಗಿಕ ವರದಿ ನೀಡಿ ಎಂದು ಸೂಚನೆ ನೀಡಿದರು. ಹೋಬಳಿಗೊಂದು ಗೋಶಾಲೆ ತೆರೆಯಬೇಕು. ಈ ಕುರಿತು ಪ್ರಸ್ತಾವ ಸಲ್ಲಿಸುವಂತೆ ಅಧಿಕಾರಿಗಳಿಗೆ ಶಾಸಕ ಟಿ.ರಘುಮೂರ್ತಿ ಹೇಳಿದರು. ಪ್ರತಿಕ್ರಿಯಿಸಿದ ಜಿಲ್ಲಾ ಉಸ್ತುವಾರಿ ಸಚಿವರು, ಮೇವಿನ ಕೊರತೆಯಾದಲ್ಲಿ, ಎಲ್ಲೆಲ್ಲಿ ಗೋಶಾಲೆ ತೆರೆಯಬೇಕಾಗುತ್ತದೆ ಎಂಬ ಮಾಹಿತಿಯನ್ನು ಸಿದ್ಧಪಡಿಸಿ ಸಲ್ಲಿಸಲು ಸೂಚಿಸಿದರು.

**ನರೇಗಾದಡಿ ಬೇಡಿಕೆಗೆ ಅನುಗುಣವಾಗಿ ಕೆಲಸ ನೀಡಿ :** ಜಿಲ್ಲೆಯಲ್ಲಿ ಬರ ಪರಿಸ್ಥಿತಿ ಇರುವುದರಿಂದ ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗಕ್ಕಾಗಿ ಬೇಡಿಕೆ ಹೆಚ್ಚಾಗಿ ಇರುತ್ತದೆ. ಹೀಗಾಗಿ ಉದ್ಯೋಗ ಬೇಡಿಕೆಗೆ ಅನುಗುಣವಾಗಿ ಕೆಲಸ ನೀಡಬೇಕು ಎಂದು ಶಾಸಕ ರಘುಮೂರ್ತಿ ಅವರು ಹೇಳಿದರು. ಇದಕ್ಕೆ ಪ್ರತಿಕ್ರಿಯಿಸಿದ ಜಿ.ಪಂ. ಸಿಇಒ ಸೋಮಶೇಖರ್ ಅವರು, ಜಿಲ್ಲೆಯಲ್ಲಿ ಈಗಾಗಲೆ ಉದ್ಯೋಗ ಸೃಷ್ಟಿಯಾಗುವಂತಹ ಕಾಮಗಾರಿಗಳಾದ ಗೋಕಟ್ಟೆ ಹಾಗೂ ನಾಲೆಗಳ ಹೂಳು ತೆಗೆಯುವುದು ಸೇರಿದಂತೆ ಹೆಚ್ಚು ಹೆಚ್ಚು ಮಾನವ ದಿನಗಳನ್ನು ಸೃಜಿಸುವಂತಹ ಕಾಮಗಾರಿಗಳನ್ನು ಕೈಗೆತ್ತಿಗೊಳ್ಳಲಾಗುತ್ತಿದೆ. ಈ ವರ್ಷ ನರೇಗಾದಡಿ 48 ಲಕ್ಷ ಮಾನವ ದಿನಗಳ ಸೃಜನೆಯ ಗುರಿಗೆ ಈಗಾಗಲೆ 41 ಲಕ್ಷ ಮಾನವ ದಿನ ಸೃಜಿಸಿ ಶೇ. 85 ರಷ್ಟು ಸಾಧನೆಯಾಗಿದೆ ಎಂದರು. ನರೇಗಾ ಯೋಜನೆಯಡಿ ಉದ್ಯೋಗ ಕಲ್ಪಿಸುವ ಕುರಿತು ಹಾಗೂ ಬೇಡಿಕೆಗೆ ಅನುಗುಣವಾಗಿ ಉದ್ಯೋಗ ನೀಡಲಾಗುವ ವಿಷಯದ ಬಗ್ಗೆ ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚು ಹೆಚ್ಚು ಜಾಗೃತಿ ಮೂಡಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವರು ಸೂಚನೆ ನೀಡಿದರು.

ಸಭೆಯಲ್ಲಿ ಶಾಸಕರಾದ ಎನ್.ವೈ.ಗೋಪಾಲಕೃಷ್ಣ, ಡಾ.ಎಂಚಂದ್ರಪ್ಪ, ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್ ಸೇರಿದಂತೆ ವಿವಿಧ ಇಲಾಖೆಯ ತಾಲ್ಲೂಕು ಹಾಗೂ ಜಿಲ್ಲಾಮಟ್ಟದ ಅಧಿಕಾರಿಗಳು ಇದ್ದರು.

ಫೋಟೋ ವಿವರ: ಚಿತ್ರದುರ್ಗ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಅಧ್ಯಕ್ಷತೆಯಲ್ಲಿ ಜಿಲ್ಲೆಯ ಬರ ನಿರ್ವಹಣೆ ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಯಿತು.

ಫಾಸ್ಟ್ ನ್ಯೂಸ್

## ಅಪಘಾತ ಪರಿಹಾರ: ಅಸಂಘಟಿತ ಕಾರ್ಮಿಕರಿಂದ ಅರ್ಜಿ

» ಚಿತ್ರದುರ್ಗ

ಕೇಂದ್ರ ಸರ್ಕಾರವು ಅಸಂಘಟಿತ ಕಾರ್ಮಿಕರ ಸಮಗ್ರ ರಾಷ್ಟ್ರೀಯ ದತ್ತಾಂಶ ಕ್ರೋಢಿಕರಿಸುವ ಉದ್ದೇಶದಿಂದ 379 ವರ್ಗಗಳ ಎಲ್ಲಾ ಅಸಂಘಟಿತ ಕಾರ್ಮಿಕರನ್ನು ಇ-ಶ್ರಮ ಪೋರ್ಟಲ್ ಮೂಲಕ 2021ರ ಆಗಸ್ಟ್ 26 ರಿಂದ ನೋಂದಾಯಿಸಲಾಗುತ್ತಿದ್ದು, 2022ರ ಮಾರ್ಚ್ 31 ರವರೆಗೆ ನೋಂದಣಿಯಾಗಿ ಮತ್ತು ಈ ದಿನಾಂಕದೊಳಗೆ ಅಪಘಾತಗೊಂಡ ಫಲಾನುಭವಿಗಳಿಗೆ ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಯೋಜನೆಯಡಿ ರೂ.2 ಲಕ್ಷಗಳ ಅಪಘಾತ ಪರಿಹಾರ ಒದಗಿಸಲಾಗುವುದು. ಈ ಸಂಬಂಧ ಅಸಂಘಟಿತ ಕಾರ್ಮಿಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಅಪಘಾತದಿಂದ ಮರಣ ಹೊಂದಿದ್ದಲ್ಲಿ ಸಲ್ಲಿಸಬೇಕಾದ ದಾಖಲೆಗಳು: ಫಲಾನುಭವಿಯ ಆಧಾರ್ ಸಂಖ್ಯೆ, ಗಂಓ ಕಾರ್ಡ್ (ಇ-ಶ್ರಮ್ ಕಾರ್ಡ್) ಸಂಖ್ಯೆ, ಮರಣ ಪ್ರಮಾಣ ಪತ್ರ, ಮರಣಕ್ಕೆ ಕಾರಣದ ವೈದ್ಯಕೀಯ ಪ್ರಮಾಣ ಪತ್ರ, ಎಫ್ಐಆರ್/ಪಂಚನಾಮ, In case claimant is minor, Guardian should produce certificate of guardianship issued by District Court while filling the claim.

ಅಪಘಾತದಿಂದ ಅಂಗವೈಕಲ್ಯ ಹೊಂದಿದ್ದಲ್ಲಿ ಸಲ್ಲಿಸಬೇಕಾದ ದಾಖಲೆಗಳು: ಫಲಾನುಭವಿಯ ಆಧಾರ್ ಸಂಖ್ಯೆ, ಗಂಓ ಕಾರ್ಡ್ (ಇ-ಶ್ರಮ್ ಕಾರ್ಡ್) ಸಂಖ್ಯೆ, ಅಪಘಾತದಿಂದ ಉಂಟಾದ ಅಂಗವೈಕಲ್ಯವನ್ನು ಸೂಚಿಸುವ ಡಿಸ್ಚಾರ್ಜ್ ಸಾರಾಂಶವನ್ನು ಒಳಗೊಂಡಿರುವ ಆಸ್ಪತ್ರೆಯ ದಾಖಲೆ, Disability certificate issued by the authorised personnel of State/UT Govt. or Unique Disability Identity Card (permanent) issued by Department of Empowerment of Persons with Disabilities, M/O Social Justice & Empowerment, Govt. of India. ಈ ಮೇಲೆ ತಿಳಿಸಿದ ಸೂಕ್ತ ದಾಖಲೆಯೊಂದಿಗೆ ಕಾರ್ಮಿಕ ಅಧಿಕಾರಿಗಳ ಕಛೇರಿ, ಜೆ.ಸಿ.ಆರ್ ಬಡಾವಣೆ, ಎಸ್.ಬಿ.ಐ ಬ್ಯಾಂಕ್ ಹತ್ತಿರ, 1ನೇ ಮಹಡಿ, ಚಿತ್ರದುರ್ಗ ಜಿಲ್ಲೆ, ಇಲ್ಲಿ ಅರ್ಜಿ ಸಲ್ಲಿಸಿ ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಪ್ರಕಣೆಯಲ್ಲಿ ತಿಳಿಸಿದ್ದಾರೆ.

## ಕಾನೂನು ಸಾಕ್ಷರತಾ ಅರಿವು ಜಾಥ ಕಾರ್ಯಕ್ರಮ



» ದಾವಣಗೆರೆ

ನ.9 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಸರ್ಕಾರಿ ಹೈಸ್ಕೂಲ್ ಮೈದಾನದಲ್ಲಿ ರಾಷ್ಟ್ರೀಯ ಕಾನೂನು ಸೇವಾ ದಿನಾಚರಣೆಯ ಅಂಗವಾಗಿ ಕಾನೂನು ಸಾಕ್ಷರತಾ ಅರಿವು ಜಾಥ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಆರ್.ಎಲ್. ಕಾನೂನು ಮಹಾವಿದ್ಯಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ ಇಲಾಖೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪೋಲೀಸ್ ಇಲಾಖೆ, ಹಾಗೂ ವಿವಿಧ ಕಾಲೇಜುಗಳ ಸಹಯೋಗದಲ್ಲಿ ಜಾಥ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಜಾಥ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ರಾಜೇಶ್ವರಿ ಎನ್ ಹೆಗಡೆ ಉದ್ಘಾಟಿಸುವರು.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ ಕರೆಣ್ಣವರ, ಜಿಲ್ಲಾಧಿಕಾರಿ ಡಾ.ವೆಂಕಟೇಶ್.ಎಂ.ವಿ, ಜಿ.ಪಂ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಸುರೇಶ್.ಬಿ ಇಟ್ನಾಳ್, ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಅರುಣ್ ಕುಮಾರ್.ಎಲ್.ಹೆಚ್, ಆರ್.ಎಲ್ ಕಾನೂನು ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಯತೀಶ್, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಅಧಿಕಾರಿ ಡಾ.ಹೆಚ್.ಲಕ್ಷ್ಮೀಕಾಂತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಾಸಂತಿ ಉಪ್ಪಾರ್, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕರಿಬಸಪ್ಪ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕೊಟ್ರೇಶ್.ಜಿ, ಸಂಚಾರಿ ಪೊಲೀಸ್ ಠಾಣೆಯ ಪೊಲೀಸ್ ವೃತ್ತ ನಿರೀಕ್ಷಕರಾದ ನಲವಾಗಲು ಮಂಜುನಾಥ್, ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷರಾದ ಜಿ.ಕೆ ಬಸವರಾಜ ಗೋಪಾನಾಳ್, ಕಾರ್ಯದರ್ಶಿ ಬಸವರಾಜ್.ಎಸ್, ಸಹ ಕಾರ್ಯದರ್ಶಿ ಎ.ಎಸ್ ಮಂಜುನಾಥ್ ಭಾಗವಹಿಸುವರು. ಪ್ಲಾಸ್ಟಿಕ್ ಮುಕ್ತ ಪರಿಸರ, ಪೋಕ್ಸೋ ಕಾನೂನು ಅರಿವು, ಬಾಲ್ಯ ವಿವಾಹ ನಿಷೇಧ ಕಾನೂನು ಅರಿವು, ಬಾಲ ಕಾರ್ಮಿಕ ಪದ್ಧತಿ ವಿರೋಧ, ರಾಷ್ಟ್ರೀಯ ಸಂಚಾರಿ ನಿಯಮ ಉಲ್ಲಂಘನೆ ಕುರಿತು ಜಾಗೃತಿ ಕುರಿತು ಎಲ್ಲಾ ಕಾಲೇಜು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಭಾಗವಹಿಸಿ ಜಾಥವನ್ನು ಜಾಗೃತಿ ಮೂಡಿಸಲಾಗುತ್ತದೆ.

# ಜಿಲ್ಲೆಯಲ್ಲಿ ಬಿಜೆಪಿಯಿಂದ ಬರ ಪ್ರವಾಸ

» ಚಿತ್ರದುರ್ಗ

ರಾಜ್ಯದಲ್ಲಿ ಆವರಿಸಿರುವ ಭೀಕರ ಬರದಿಂದ ರೈತರು ಬಳಲಿ ಹೋಗಿದ್ದು, ಅವರ ಸಮಸ್ಯೆಗಳನ್ನು ಆಲಿಸಿ ಪರಿಹಾರ ಕೊಡಿಸಲು ಭಾರತೀಯ ಜನತಾ ಪಕ್ಷ ಕೈಗೊಂಡಿರು ಬರ ಅಧ್ಯಯನ ತಂಡ ಮಂಗಳವಾರ ಚಿತ್ರದುರ್ಗ ಜಿಲ್ಲೆಯ ಭರಮಸಾಗರ ಹೋಬಳಿಯ ಕೊಳಾಳ್ ಗ್ರಾಮಕ್ಕೆ ಭೇಟಿ ನೀಡಿತ್ತು.

ಮಾಜಿ ಸಭಾಪತಿ ವಿಶ್ವೇಶ್ವರ ಹೆಗಡೆ ಕಾಗೇರಿ ನೇತೃತ್ವದ ದಾವಣಗೆರೆ ಸಂಸದ ಜಿ.ಎಂ.ಸಿದ್ದೇಶ್ವರ, ಶಾಸಕರಾದ ಎಂ.ಚಂದ್ರಪ್ಪ, ಕೆ.ಎಸ್.ನವೀನ್, ಮಾಜಿ ಶಾಸಕರಾದ ಜಿ.ಹೆಚ.ತಿಪ್ಪಾರೆಡ್ಡಿ, ಬಿ.ಪಿ.ಹರೀಶ್, ರಾಮಚಂದ್ರ, ಮುರುಳಿ ಅವರ ತಂಡ ಮಂಗಳವಾರ ಭರಮಸಾಗರ ಹೋಬಳಿಯ ಕೊಳಾಳ್ ಗ್ರಾಮದ ಚೌಡೇಶ್ವರಿ ದೇವಸ್ಥಾನದ ಸುತ್ತಮತ್ತಲಿನ ಸುಮಾರು 8 ಸಾವಿರ ಎಕರೆ ಮೆಕ್ಕೆಜೋಳ ಬೆಳೆ ನಷ್ಟವಾಗಿದ್ದು, ಗ್ರಾಮದ ಲೋಕೇಶ್ ಅವರ ಜಮೀನಿಗೆ ಭೇಟಿ ನೀಡಿ ಅಲ್ಲಿನ ಮೆಕ್ಕೆಜೋಳ ಬೆಳೆಯನ್ನು ವಿಕ್ಷಣೆ ಮಾಡಿದರು.ಸಾವಿರಾರು ರೂ.ಗಳಗಳನ್ನು ಖರ್ಚು ಮಾಡಿ ಹುಳಮೆ ಮಾಡಲಾಗಿದೆ.



ಆದರೆ ಈ ಭಾರೀ ಮಳೆ ಭಾರದ ಕಾರಣ ಬೆಳೆ ನಷ್ಟ ಆಗಿದೆ. ಸಾಲ ಮಾಡಿ ಹುಳಮೆ ಮಾಡಲಾಗಿದೆ. ಹಾಕಿದ ಬಂಡವಾಳವನ್ನು ಕಾಣದ ಸ್ಥಿತಿ ಎದುರಾಗಿದೆ ಎಂದು ರೈತ ಲೋಕೇಶ್ ತಮ್ಮ ಅಳಲು ತೋಡಿಕೊಂಡರು.ನಂತರ ಮಾತನಾಡಿದ ವಿಶ್ವೇಶ್ವರ ಹೆಗಡೆ ಕಾಗೇರಿ, ರಾಜ್ಯವು ಎಂದು ಕಾಣದಂತಹ ಭೀಕರ ಬರವನ್ನು ಎದುರಿಸುತ್ತಿದೆ. ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಡಿಕೆ ಶಿವಕುಮಾರ್ ಹಾಗೂ ಅವರ ಸಚಿವ ಸಂಪುಟ ಮುಖ್ಯಮಂತ್ರಿ ಸ್ಥಾನದ ಬಗ್ಗೆ ಕಚ್ಚಾಟ ನಡೆಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಸರ್ಕಾರವನ್ನು ಎಚ್ಚರಿಸಿ ರೈತರ ಸಮಸ್ಯೆಗಳನ್ನು ಈಡೇರಿಸಲು ಭಾರತೀಯ ಜನತಾ ಪಕ್ಷ 17 ತಂಡಗಳನ್ನು ಮಾಡಿಕೊಂಡು ಪ್ರವಾಸ ಮಾಡುತ್ತಿದ್ದೇವೆ ಎಂದರು.

ಶೇಕಡ 30% ಮಾತ್ರ ಮಳೆ ಆಗಿದ್ದು, ಸಂಪೂರ್ಣ ರಾಜ್ಯವೇ ಬರ ಆವರಿಸಿದೆ. ರೈತರಿಗೆ ಆಗಿರುವ ನಷ್ಟ. ಜನ ಜಾನುವಾರುಗಳ ಸ್ಥಿತಿಗತಿ ಭೀಕರವಾಗಿದೆ. ಆದರೂ ಕೂಡ ಸಿದ್ದರಾಮಯ್ಯ ಹಾಗೂ ಡಿಕೆ ಶಿವಕುಮಾರ್ ಸರ್ಕಾರ ರೈತರನ್ನು ಅತ್ಯಂತ ನಿರ್ಲಕ್ಷ ಧೋರಣೆಯಿಂದ ನೋಡುತ್ತಿದೆ ಇದರ ವಿರುದ್ದವಾಗಿ ಬಿಜೆಪಿ ಜನಪರ ಧ್ವನಿ ಎತ್ತಬೇಕು ಎಂದು ಬರ ಅಧ್ಯಯನ ಮಾಡುತ್ತಿದ್ದು, ಸಿದ್ದರಾಮಯ್ಯ ಈಗ ಎಚ್ಚೆತ್ತುಕೊಂಡು, ಸಚಿವರಿಗೆ ಪ್ರವಾಸ ಮಾಡಲು ಹೇಳಿದ್ದಾರೆ. ಹಣ ಬಿಡುಗಡೆ ಮಾಡುವುದಾಗಿ ಹೇಳಿದ್ದಾರೆ. ವಿದ್ಯುತ್ ಕ್ಷಾಮ ಹೆಚ್ಚಿದೆ ಎಂಬುದು ಗೊತ್ತಿದ್ದರು ಈಗ 7 ಗಂಟೆ ವಿದ್ಯುತ್ ನೀಡುವುದಾಗಿ ಹೇಳಿರುವ ಮುಖ್ಯಮಂತ್ರಿಗಳು ಜನರ, ರೈತರ ಹಾಗೂ ಜಾನುವಾರುಗಳ ಸ್ಥಿತಿಗತಿಯನ್ನು ಅರಿತು ಕೆಲಸ ಮಾಡಬೇಕು ಎಂದು ಆಗ್ರಹಿಸಿದರು.

## ಸಮವಸ್ತ್ರ ಮೈಮೇಲಿದ್ದರೆ ಶಿಸ್ತು ಮೂಡಿಸುತ್ತದೆ: ಎಸ್ಪಿ

» ಚಿತ್ರದುರ್ಗ

ಸಮವಸ್ತ್ರ ಮೈಮೇಲಿದ್ದರೆ ಶಿಸ್ತು ಮೂಡಿಸುತ್ತದೆ ಎಂದು ಜಿಲ್ಲಾ ರಕ್ಷಣಾಧಿಕಾರಿ ಧರ್ಮೇಂದ್ರಕುಮಾರ್ ಮೀನಾ ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆ, ಬಾಪೂಜಿ ಸಮೂಹ ಸಂಸ್ಥೆಗಳು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆಯಿಂದ ರಾಷ್ಟ್ರೀಯ ಹೆದ್ದಾರಿ-13 ಪಿಳ್ಳೆಕೆರನಹಳ್ಳಿಯಲ್ಲಿರುವ ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ ಎರಡು ದಿನಗಳ ವಿದ್ಯಾ ಸೋಪಾನ ಶಿಬಿರದಲ್ಲಿ ಧ್ವಜ ಚೀಟಿ ಬಿಡುಗಡೆಗೊಳಿಸಿ ಮಾತನಾಡಿದರು.

ದೇಶದ ಮಕ್ಕಳು ಆದರ್ಶ ನಾಗರೀಕರಾಗಲು ಶಿಸ್ತು ಮುಖ್ಯ. ಎನ್.ಸಿ.ಸಿ.ಯಲ್ಲೂ ಮಕ್ಕಳಿಗೆ ಸಮವಸ್ತ್ರವಿರುತ್ತದೆ. ಇದರಿಂದ ಜೀವನದಲ್ಲಿ ಸಮಯಪ್ರಜ್ಞೆ ಬೆಳೆಯುತ್ತದೆಯಲ್ಲದೆ ಗುರು-ಹಿರಿಯರನ್ನು ಗೌರವಿಸುವ ಸಂಸ್ಕೃತಿ ಕಲಿಯಬಹುದು ಎಂದು ಹೇಳಿದರು.ಸ್ಕೌಟ್ ಅಂಡ್ ಗೈಡ್ಸ್ ಜಿಲ್ಲಾ ಆಯುಕ್ತ ಕ್ಷೇತ್ರ ಶಿಕ್ಷಣಾಧಿಕಾರಿ




ಎಸ್.ನಾಗಭೂಷಣ್ ಮಾತನಾಡಿ ಸ್ಕೌಟ್ ಅಂಡ್ ಗೈಡ್ಸ್ ಮಕ್ಕಳನ್ನು ಸದಾ ಕ್ರಿಯಾಶೀಲವಾಗಿರಿಸುತ್ತದೆ. ಶಾಂತಿ, ಸಹನೆ, ತಾಳ್ಮೆ, ದೇಶಭಕ್ತಿ ಮೈಗೂಡಿಸಿ ಸೇವಾ ಮನೋಭಾವನೆ ಕಲಿಸುತ್ತದೆ. ಇಲ್ಲಿ ಪಾಲ್ಗೊಳ್ಳುವವರು ತೃತೀಯ ಸೋಪಾನ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿ ನಂತರ ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಪಾಲ್ಗೊಳ್ಳುವ ಅವಕಾಶವಿರುತ್ತದೆ ಎಂದು ಸ್ಕೌಟ್ ಅಂಡ್ ಗೈಡ್ಸ್‌ನ ಮಹತ್ವ ತಿಳಿಸಿದರು.ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದ ಕಾರ್ಯ ದರ್ಶಿ ಕೆ.ಎಂ.ವಿರೇಶ್ ಮಾತನಾಡುತ್ತ ಭಾರತ್ ಸ್ಕೌಟ್ ಮತ್ತು ಗೈಡ್ಸ್ ಸಂಸ್ಥೆಯಿಂದ ರಾಜ್ಯದಲ್ಲಿ ಅತ್ಯುತ್ತಮವಾದ ಕೆಲಸಗಳಾಗುತ್ತಿವೆ. ಮುಖ್ಯ ಆಯುಕ್ತ ಪಿ.ಜಿ.ಆರ್.ಸಿಂಧ್ಯಾ, ಕೊಂಡಜ್ಜಿ ಬಸಪ್ಪ ಇವರುಗಳ ಕೊಡುಗೆಯನ್ನು ಸ್ಮರಿಸಿದರು. ಚಿಕ್ಕಂದಿನಿಂದಲೇ ಮಕ್ಕಳು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನಲ್ಲಿ ತೊಡಗಿಕೊಂಡು ಶಿಸ್ತು, ಸಂಯಮ, ಸಮಯ ಪ್ರಜ್ಞೆ ಬೆಳೆಸಿಕೊಳ್ಳಿ ಎಂದು ಕಿವಿಮಾತು ಹೇಳಿದರು.

ಎಡಿಸಿ.ನಾಯ್ಡು, ಸ್ಕೌಟ್ ಅಂಡ್ ಗೈಡ್ಸ್ ಜಿಲ್ಲಾ ಸಂಸ್ಥೆ ಸಹಕಾರ್ಯದರ್ಶಿ ಡಾ.ರಹವಂತ್ ವ್ರುಲ್ಲಾ, ಬಿ.ಇಡಿ.ಕಾಲೇಜಿನ ಪ್ರಾಚಾರ್ಯರಾದ ಶ್ರೀಮತಿ ಎಂ.ಆರ್. ಜಯಲಕ್ಷ್ಮಿ, ಅನಂತರೆಡ್ಡಿ, ಸ್ಥಳೀಯ ಸಂಸ್ಥೆ ಉಪಾಧ್ಯಕ್ಷ ಪ್ರವೀಣ್ ವೇದಿಕೆಯಲ್ಲಿದ್ದರು.

ಭಾರತೀಯ ರೆಡ್‌ಕ್ರಾಸ್ ಜಿಲ್ಲಾ ಶಾಖೆಯ ವೈ.ಬಿ.ಮಹೇಂದ್ರನಾಥ್, ಶಿಕ್ಷಕರುಗಳಾದ ಸುರೇಶ್‌ಬಾಬು, ಯಲ್ಲಪ್ಪ, ಲಿಂಗರಾಜು, ಪಾಟೀಲ್, ಶೇಖರ್‌ನಾಯ್ಕ, ಪಿ.ವೈ.ದೇವರಾಜ್ ಪ್ರಸಾದ್, ತಿಪ್ಪೇಸ್ವಾಮಿ, ಚಮನ್‌ಬೀ, ಬಷೀರ, ಅರುಂಧತಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು..

## ಸವಿತಾ ಸಮಾಜವನ್ನು ಪರಿಶಿಷ್ಟ ಜಾತಿಗೆ ಸೇರಿಸುವಂತೆ ಮನವಿ



» ಚಿತ್ರದುರ್ಗ

ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ರಾಜಕೀಯವಾಗಿ ಹಿಂದುಳಿದಿರುವ ಸವಿತಾ ಸಮಾಜಕ್ಕೆ ಎಸ್ಸಿ. ಮೀಸಲಾತಿ ನೀಡಬೇಕು. ನಮ್ಮ ಮೇಲೆ ಜಾತಿನಿಂದನೆ ಮಾಡುವವರ ವಿರುದ್ದ ಕೇಸು ದಾಖಲಿಸುವಂತೆ ಕಾಯಿದೆ ಜಾರಿಗೆ ತರಬೇಕೆಂದು ಜಿಲ್ಲಾ ಹಾಗೂ ತಾಲ್ಲೂಕು ಸವಿತಾ ಸಮಾಜದಿಂದ ಮಂಗಳವಾರ ಅಪರ ಜಿಲ್ಲಾಧಿಕಾರಿ ಹಾಗೂ ತಹಶೀಲ್ದಾರ್ ಮೂಲಕ ರಾಜ್ಯದ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು. ಕುಲಕಸುಬನ್ನೆ ನೆಚ್ಚಿಕೊಂಡು ಇಂದಿಗೂ ಬದುಕುತ್ತಿರುವ ಸವಿತಾ ಸಮಾಜ ಕೊರೋನಾ ಸಂದರ್ಭದಲ್ಲಿ ದುಡಿಮೆಯಿಲ್ಲದೆ ಸಾಕಷ್ಟು ಸಂಕಟ ಎದುರಿಸಬೇಕಾಯಿತು. ಹಾಗಾಗಿ ನಮ್ಮ ಸಮಾಜವನ್ನು ಪರಿಶಿಷ್ಟ ಜಾತಿಗೆ ಸೇರಿಸುವಂತೆ ಈ ಹಿಂದೆಯೂ ಮನವಿ ಮಾಡಿಕೊಂಡಿದ್ದರೂ ರಾಜ್ಯ ಸರ್ಕಾರದಿಂದ ಸ್ಪಂದನೆಯಿಲ್ಲ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸುವಂತೆ ವಿನಂತಿಸಿದರು.ಸವಿತಾ ಸಮಾಜದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎನ್.ಡಿ.ಕುಮಾರ್, ಆರ್.ಶ್ರೀನಿವಾಸ್, ಎನ್.ಶ್ರೀನಿವಾಸ್, ನಾಗರಾಜು, ಘನಶ್ಯಾಂ, ರಂಜಿತ, ಬೆಳಗಟ್ಟ ಶ್ರೀನಿವಾಸ್, ಧರ್ಮಣ್ಣ, ಸಾಯಿನಾಥ್ ಇನ್ನು ಮುಂತಾದವರು ಈ ಸಂದರ್ಭದಲ್ಲಿ ಹಾಜರಿದ್ದರು.




ಚಿತ್ರದುರ್ಗ ಹಾಕಿ ಕ್ಲಬ್ ವತಿಯಿಂದ ಇತ್ತೀಚೆಗೆ ನಡೆದ ಜಿಲ್ಲಾ ಮಟ್ಟದ ಹಾಕಿ ಪಂದ್ಯಾವಳಿಯಲ್ಲಿ ಗುಡ್ಡದರಂಗವ್ವನಹಳ್ಳಿ ಬಾಲಕಿ-ಬಾಲಕಿಯರ ವಿಭಾಗ ಪ್ರಥಮ ಸ್ಥಾನ ಗಳಿಸಿತು. ಸರ್ಕಾರಿ ಕಲಾ ಕಾಲೇಜಿನ ಬಾಲಕರ ವಿಭಾಗ ದ್ವಿತೀಯ ಸ್ಥಾನ, ದೊಡ್ಡಸಿದ್ದವ್ವನಹಳ್ಳಿ ಪೂರ್ಣಪ್ರಜ್ಞಾ ಶಾಲೆಯ ಬಾಲಕಿಯರು ದ್ವಿತೀಯ ಸ್ಥಾನ ಪಡೆದುಕೊಂಡರು.

## ಗ್ರಂಥಾಲಯ ಸಪ್ತಾಹ: ವಿವಿಧ ಸ್ಪರ್ಧೆ

ತುಮಕೂರು: ರಾಷ್ಟ್ರೀಯ ಗ್ರಂಥಾಲಯ ಸಪ್ತಾಹದ ಅಂಗವಾಗಿ ತುಮಕೂರು ನಗರ ಕೇಂದ್ರ ಗ್ರಂಥಾಲಯದಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ ಎಂದು ನಗರ ಕೇಂದ್ರ ಗ್ರಂಥಾಲಯದ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ನವೆಂಬರ್ 15ರಂದು ಮಧ್ಯಾಹ್ನ 2 ರಿಂದ 3ರವರೆಗೆ ಭಾರತ ಸಂವಿಧಾನ ಕುರಿತು ಪ್ರಬಂಧ ಸ್ಪರ್ಧೆ ಮತ್ತು ಮಧ್ಯಾಹ್ನ 3.15 ರಿಂದ 3.45ರವರೆಗೆ ರಸಪ್ರಶ್ನೆ ಸ್ಪರ್ಧೆ; ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ನವೆಂಬರ್ 16ರಂದು ಬೆಳಿಗ್ಗೆ 11 ರಿಂದ 12ರವರೆಗೆ ಭಾವಗೀತೆ/ಭಕ್ತಿಗೀತೆ/ಜನಪದ ಗೀತೆ ಸ್ಪರ್ಧೆ 4ರಿಂದ 7ನೇ ತರಗತಿ ವಿದ್ಯಾರ್ಥಿಗಳಿಗಾಗಿ ಚಿತ್ರಕಲೆ ಸ್ಪರ್ಧೆ, 1.15 ರಿಂದ 1.30ರವರೆಗೆ ಜ್ಞಾಪಕಶಕ್ತಿ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ.ಒಂದು ಸ್ಪರ್ಧೆಗೆ ತಲಾ 3ವಿದ್ಯಾರ್ಥಿಗಳು ಹೆಸರನ್ನು ಸೂಚಿಸುವುದು, ರಂಗೋಲಿ ಸ್ಪರ್ಧೆಗೆ, ಚಿತ್ರಕಲೆಗೆ ಬೇಕಾದ ಸಲಕರಣೆಗಳನ್ನು ವಿದ್ಯಾರ್ಥಿಗಳೇ ತರತಕ್ಕದ್ದು, ಸ್ಪರ್ಧೆಗೆ ಭಾಗವಹಿಸುವ ವಿದ್ಯಾರ್ಥಿಗಳ ವಿವರಗಳನ್ನು ಶಾಲಾ ಪತ್ರದ ಮೂಲಕ ನವೆಂಬರ್ 10, 2023ರೊಳಗಾಗಿ ನಗರ ಕೇಂದ್ರ ಗ್ರಂಥಾಲಯ, ತುಮಕೂರು ಇಲ್ಲಿ ನೋಂದಾಯಿಸುವುದು.

ಪ್ರಮುಖ ಸುದ್ದಿ

### ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಡಿ.ಎಂ.ಅಭಿನವ್ ಹೇಳಿಕೆ

# ತಜ್ಞ ವೈದ್ಯರ ಸೇವೆ ಕೊಳಗೇರಿ ನಿವಾಸಿಗಳಿಗೆ ಸಿಗುವಂತಾಗಲಿ

» ಚಿತ್ರದುರ್ಗ

ತಜ್ಞ ವೈದ್ಯರ ಸೇವೆ ರಾಷ್ಟ್ರೀಯ ಆರೋಗ್ಯ ಅಭಿಯಾನದ ಅಡಿಯಲ್ಲಿ ಅಗತ್ಯವಿರುವ ಕೊಳಗೇರಿ ನಿವಾಸಿಗಳಿಗೆ ಸಿಗುವಂತಾಗಲಿ ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಡಿ.ಎಂ.ಅಭಿನವ್

ಚಿತ್ರದುರ್ಗ ನಗರದ ಚಳ್ಳಕೆರೆ ರಸ್ತೆಯಲ್ಲಿರುವ ವಾರ್ಡ್ ನಂಬರ್ 13ರ ವೆಂಕಟೇಶ್ವರ ಬಡಾವಣೆ ಕೊಳಗೇರಿ ಪ್ರದೇಶದ ಸರ್ಕಾರಿ ಶಾಲೆಯಲ್ಲಿ ಮಂಗಳವಾರ ರಾಷ್ಟ್ರಿಯ ಆರೋಗ್ಯ ಅಭಿಯಾನದ ಅಡಿಯಲ್ಲಿ ಬಸವೇಶ್ವರ ವೈದ್ಯಕೀಯ ಕಾಲೇಜು ಮತ್ತು ರಾಜ್ಯ ಕೊಳಗೇರಿ ಮಂಡಳಿ ಇವರ ಸಹಕಾರದೊಂದಿಗೆ ಹಮ್ಮಿಕೊಂಡಿದ್ದ ತಜ್ಞ ವೈದ್ಯರ ಆರೋಗ್ಯ ತಪಾಸಣಾ ಶಿಬಿರ ಉದ್ದೇಶಿಸಿ ಅವರು ಮಾತನಾಡಿದರು.

ಚಿತ್ರದುರ್ಗ ತಾಲೂಕಿನ ಮೂರು ನಗರ ಆರೋಗ್ಯ ಕೇಂದ್ರಗಳ ವ್ಯಾಪ್ತಿಯಲ್ಲಿ ಬರುವ ಆಯ್ದ ಕೊಳಗೇರಿ ಪ್ರದೇಶಗಳಲ್ಲಿ ಪ್ರತಿ ವರ್ಷ ಆರೋಗ್ಯ ಮಾನದಂಡಗಳನ್ನು ಪರಿಗಣಿಸಿ ನಾಲ್ಕು ಕೊಳಗೇರಿ ಪ್ರದೇಶಗಳಲ್ಲಿ ತಜ್ಞ



ವೈದ್ಯರ ಆರೋಗ್ಯ ತಪಾಸಣಾ ಶಿಬಿರವನ್ನು ನಡೆಸಲಾಗುತ್ತಿದೆ. ವಿಶೇಷವಾಗಿ ಸೇವಾ ವಂಚಿತರಿಗೆ ಆರೋಗ್ಯ ಸೇವಗಳನ್ನು ಗುರುತಿಸಿ ಸ್ಥಳದಲ್ಲಿಯೇ ತಪಾಸಣೆ ನಡೆಸಿ, ಅಗತ್ಯವಿದ್ದಲ್ಲಿ ಉನ್ನತ ಮಟ್ಟದ ಆಸ್ಪತ್ರೆ ಚಿಕಿತ್ಸೆ ಸರ್ಕಾರದ ಯೋಜನೆ ಅಡಿ ಸಿಗುವಂತೆ ಮಾಡಲಾಗುವುದು ಎಂದರು.

ತಾಲ್ಲೂಕು ಆರೋಗ್ಯ ಅಧಿಕಾರಿ ಡಾ.ಬಿ.ವಿ.ಗಿರೀಶ್ ಮಾತನಾಡಿ, ಆಯುಷ್ಮಾನ್ ಭವ ಯೋಜನೆಯಲ್ಲಿ ಗ್ರಾಮ ಒನ್ ಸೇವಾ ಕೇಂದ್ರಗಳಲ್ಲಿ ನಿಮ್ಮ ಆಧಾರ್ ಮತ್ತು ಪಡಿತರ ಚೀಟಿಯನ್ನು ನೀಡಿ ನೋಂದಾಯಿಸಿ ಕಾರ್ಡ್ ಪಡೆಯಿರಿ.

ಆಯುಷ್ಮಾನ್ ಭವ ಯೋಜನೆ ಅಡಿಯಲ್ಲಿ ಉನ್ನತ ಮಟ್ಟದ ಆಸ್ಪತ್ರೆಯ ಚಿಕಿತ್ಸಾ ವೆಚ್ಚವನ್ನು ಸರ್ಕಾರವೇ ಭರಿಸಲಿದೆ. ನೋಂದಾಯಿತ ಖಾಸಗಿ ಆಸ್ಪತ್ರೆಗಳಲ್ಲಿಯೂ ಸಹ ಈ ಸೌಲಭ್ಯ ದೊರೆಯುತ್ತದೆ. ಕೊಳಗೇರಿ ಪ್ರದೇಶದ ಜನರು ಇದರ ಸದುಪಯೋಗಪಡಿಸಿಕೊಳ್ಳಿ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಜಾನಕಿ ಮಾತನಾಡಿ, ಬಾಲ್ಯ ವಿವಾಹದಿಂದ ಉಂಟಾಗುವ ಕೌಟುಂಬಿಕ ಸಮಸ್ಯೆಗಳು ವೈಯಕ್ತಿಕ ಸಮಸ್ಯೆಗಳನ್ನು ವಿವರಿಸಿದರು.

ತಪಾಸಣಾ ಶಿಬಿರದಲ್ಲಿ ತಜ್ಞ ವೈದ್ಯರಾದ ಡಾ.ಆಯುಷ್, ಡಾ.ವಸುಧ, ಬುದ್ಧನಗರ ಆರೋಗ್ಯ ಕೇಂದ್ರದ ಡಾ.ಸುರೇಂದ್ರ, ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿ ಎನ್. ಎಸ್. ಮಂಜುನಾಥ್, ನಗರ ಆರೋಗ್ಯ ಕೇಂದ್ರದ ಜಿಲ್ಲಾಮಟ್ಟದ ವ್ಯವಸ್ಥಾಪಕ ಅರ್ಜುನ್ ಕರಕಪ್ಪ ಮೇಟಿ, ನಗರಸಭಾ ಸದಸ್ಯರಾದ ತಾರಕೇಶ್ವರಿ, ಕೊಳಗೇರಿ ಮಂಡಳಿಯ ಚಂದ್ರಮ್ಮ, ಶಾಲಾ ಶಿಕ್ಷಕರಾದ ಮಂಜುಳ, ನಾಗರಾಜ್, ಅಂಗನವಾಡಿ ಕಾರ್ಯಕರ್ತೆಯರಾದ ರಂಗಮ್ಮ, ಆಶಾ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಗುರುಮೂರ್ತಿ, ಪ್ರಯೋಗಶಾಲ ತಂತ್ರಜ್ಞ ರಜನಿ, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿ ಗೀತಾ, ಬುದ್ಧನಗರಬುದ್ಧ ನಗರ ನಗರ ಆರೋಗ್ಯ ಕೇಂದ್ರದ ಎಲ್ಲಾ ಸಿಬ್ಬಂದಿಗಳು, ಕೊಳಗೇರಿ ನಿವಾಸಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ 60 ಜನ ಕೊಳಗೇರಿ ನಿವಾಸಿಗಳ ಆರೋಗ್ಯ ತಪಾಸಣೆ ನಡೆಸಲಾಯಿತು.

## ಫಾಸ್ಟ್ ನ್ಯೂಸ್

### ತೆಲಂಗಾಣ ಚುನಾವಣೆ: ಅಲಂಪೂರ್ ಮೀಸಲು ಕ್ಷೇತ್ರದ ವೀಕ್ಷಕರಾಗಿ ರಘುಮೂರ್ತಿ ನೇಮಕ

» ಚಳ್ಳಕೆರೆ



ತೆಲಂಗಾಣದಲ್ಲಿ ವಿಧಾನಸಭಾ ಚುನಾವಣೆ ಪ್ರಕ್ರಿಯೆಗಳು ಪ್ರಾರಂಭವಾಗಿದ್ದು, ಪಕ್ಷದ ಅಭ್ಯರ್ಥಿಗಳ ಪರವಾಗಿ ಗೆಲುವು ಸಾಧಿಸುವ ನಿಟ್ಟಿನಲ್ಲಿ ಎಐಸಿಸಿ ವೀಕ್ಷಕರನ್ನು ನೇಮಿಸಿ ಚುನಾವಣೆ ಗೆಲುವಿಗೆ ರಣತಂತ್ರ ರೂಪಿಸಿದ್ದು, ಬಹುತೇಕ ಶಾಸಕರು ಹಾಗೂ ಸಚಿವರಿಗೆ ಚುನಾವಣಾ ಉಸ್ತುವಾರಿಯನ್ನು ನಿಗದಿಪಡಿಸಲಾಗಿದೆ. ಎಐಸಿಸಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್, ಚುನಾವಣಾ ವೀಕ್ಷಕರ ಪಟ್ಟಿಯನ್ನು ಬಿಡುಗಡೆ ಮಾಡಿದ್ದು, ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಶಾಸಕ ಟಿ.ರಘುಮೂರ್ತಿಯವರಿಗೆ ತೆಲಂಗಾಣದ ಅಲಂಪೂರ್( ಪರಿಶಿಷ್ಟ ಜಾತಿ ಮೀಸಲು ಕ್ಷೇತ್ರ) ಕ್ಷೇತ್ರದ ವೀಕ್ಷಕರನ್ನಾಗಿ ನೇಮಕ ಮಾಡಲಾಗಿದೆ. ತೆಲಂಗಾಣದ ಅಲಂಪೂರ್ ಮೀಸಲು ಕ್ಷೇತ್ರದ ವೀಕ್ಷಕರಾಗಿ ನೇಮಕಗೊಂಡ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಶೀಘ್ರದಲ್ಲೇ ತೆಲಂಗಾಣಕ್ಕೆ ತೆರಳಿ ಪಕ್ಷದ ಅಭ್ಯರ್ಥಿಯ ಗೆಲುವಿಗಾಗಿ ಶ್ರಮಿಸಲಿದ್ದಾರೆ. ಶಾಸಕರ ಜೊತೆಯಲ್ಲಿ ಕ್ಷೇತ್ರದ ಕೆಲವು ಪ್ರಮುಖ ನಾಯಕರು, ಕಾರ್ಯಕರ್ತರು ಚುನಾವಣಾ ಪ್ರಚಾರಕ್ಕೆ ತೆರಳುವ ಸಂಭವವಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

### ಸಾಣೇಹಳ್ಳಿಯಲ್ಲಿ ತಾತ್ವಿಕತೆ ಅನುಸಂಧಾನ; ಬೂದಾಳು



» ಹೊಸದುರ್ಗ

ತಾತ್ವಿಕತೆ ಬದುಕಿದ, ತಾತ್ವಿಕತೆಯ ಆಕಾರವಾದುದು ಸಾಣೇಹಳ್ಳಿ. ಹೀಗಾಗಿ ಇಲ್ಲಿ ತಾತ್ವಿಕತೆಯ ಅನುಸಂಧಾನ ನಡೆಯುತ್ತಿದೆ ಎಂದು ಲೇಖಕ, ಡಾ.ನಟರಾಜ ಬೂದಾಳು ಮೆಚ್ಚುಗೆ ವ್ಯಕ್ತಪಡಿಸಿದರು. ತಾಲೂಕಿನ ಸಾಣೇಹಳ್ಳಿಯಲ್ಲಿ ನಡೆಯುತ್ತಿರುವ ರಾಷ್ಟ್ರೀಯನಾಟಕೋತ್ಸವಅಂಗವಾಗಿಚಂದ್ರಶೇಖರ ತಾಳ್ಯ ಅವರ 'ಭಾರತೀಯ ತತ್ವಶಾಸ್ತ್ರದ ಪರಿಚಯ' ಕೃತಿಯನ್ನು ಮಂಗಳವಾರ ಬಿಡುಗಡೆಗೊಳಿಸಿ ಮಾತನಾಡಿದರು.ನಮಗೆ ಧರ್ಮವನ್ನು ಬದುಕಲು ಬರುವುದಿಲ್ಲ,ಧರ್ಮದ ಹೆಸರಲ್ಲಿ ಜಗಳವಾಡುತ್ತೇವೆ, ಅರಿಯಲ್ಲ. ಹೀಗೆಯೇ ಸತ್ಯ ಮತ್ತು ಸುಳ್ಳುಗಳನ್ನು ನುಣ್ಣಗೆ ಅರೆದು ದವಡೆಯಲ್ಲಿಟ್ಟುಕೊಂಡಿರುತ್ತೇವೆ. ನಾವು ಜ್ಞಾನಪ್ರಿಯರಲ್ಲ, ಆಚಾರಪ್ರಿಯರು. ಸ್ವಾತಂತ್ರ್ಯಪ್ರಿಯರಲ್ಲ, ಭಕ್ತಿಪ್ರಿಯರು. ಇತಿಹಾಸಪ್ರಿಯರಲ್ಲ, ಪುರಾಣಪ್ರಿಯರು. ಆದರೆ ಇತಿಹಾಸವನ್ನು ಪುರಾಣ ರೀತಿ ಓದುತ್ತೇವೆ. ಸುಳ್ಳುಪ್ರಿಯರು. ಆದರೆ ತತ್ವವನ್ನು ಸುಳ್ಳು ಹೇಳಲು ಬರುವುದಿಲ್ಲ. ಹೀಗಾಗಿ ಸತ್ಯಕ್ಕೆ ತಾಳುವ ಗುಣವಿದೆ ಕೊನೆಗೆ ನ್ಯಾಯವನ್ನು ಒದಗಿಸಿಕೊಡುವುದು ಎಂದು ಅವರು ಹೇಳಿದರು. ಸಾನ್ನಿಧ್ಯ ವಹಿಸಿದ್ದ ಸಾಣೇಹಳ್ಳಿ ಪಂಡಿತಾರಾಧ್ಯ ಸ್ವಾಮೀಜಿ ಮಾತನಾಡಿ, ಎಲ್ಲ ಕಾಲದಲ್ಲೂ ಸುಳ್ಳನ್ನು ಸತ್ಯ ಮಾಡುವುದು ಕಷ್ಟ. ಆದರೆ ಸತ್ಯವನ್ನು ಸತ್ಯವಾಗಿ ಮಾಡುವುದು ತತ್ವಶಾಸ್ತ್ರ ಎಂದರು. ಲೇಖಕ ಚಂದ್ರಶೇಖರ ತಾಳ್ಯ ವೇದಿಕೆ ಮೇಲಿದ್ದರು.

### ಶಾಸಕ ಬಸವರಾಜು ವಿ.ಶಿವಗಂಗಾ ಚನ್ನಗಿರಿ ಪಟ್ಟಣ ರೌಂಡ್ಸ್



» ಚನ್ನಗಿರಿ

ಶಾಸಕ ಬಸವರಾಜು ವಿ ಶಿವಗಂಗಾ ಪಟ್ಟಣದ ವಾರ್ಡ್ –1 ಮತ್ತು –2 ರಲ್ಲಿ ಭೇಟಿ ನೀಡಿ ಪಟ್ಟಣ ವಾಸಿಗಳ ಸಮಸ್ಯೆಗಳನ್ನು ಆಲಿಸಳಿಸಿದರು. ವಿವಿಧ ಯೋಜನೆಗಳ ಮೂಲಕ ಚನ್ನಗಿರಿ ಪಟ್ಟಣದ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ. ಕಸವಿಲೇವಾರಿ, ರಸ್ತೆ ಮತ್ತು ಚರಂಡಿಗಳ ಸೂಕ್ತ ನಿರ್ವಹಣೆ, ಕುಡಿಯುವ ನೀರು, ಬೀದಿ ದೀಪಗಳ ಸಮಸ್ಯೆ ಬಾರದಂತೆ ಸಮರ್ಪಕವಾಗಿ ನಿರ್ವಹಿಸಲು ಸಂಬಂಧ ಪಟ್ಟ ಇಲಾಖೆಯ ಮುಖ್ಯಸ್ಥರಿಗೆ ಸೂಚಿಸಲಾಗಿದೆ. ಅಭಿವೃದ್ಧಿಯೇ ನಮ್ಮ ಆದ್ಯತೆಯಾಗಿದೆ. ಜನರ ಸಂಕಷ್ಟಗಳಿಗೆ ಪರಿಹರಿಸುವ ಪ್ರಯತ್ನ ನಿರಂತರವಾಗಿರುತ್ತದೆ ಎಂದರು. ಈ ವೇಳೆ ಅಧಿಕಾರಿಗಳು ಸಹ ಉಪಸ್ಥಿರಿದ್ದರು.

**ಸೋಮಗುದ್ದು ಗ್ರಾಮ ಪಂಚಾಯಿತಿ ಆವರಣದಲ್ಲಿ ಪಂಚಾಯಿತಿ ಮಟ್ಟದ ಜನಸಂಪರ್ಕ ಸಭೆಯಲ್ಲಿ ಶಾಸಕ ಟಿ.ರಘುಮೂರ್ತಿ**

# ಜನರ ಸಮಸ್ಯೆಗಳ ನಿವಾರಣೆಗೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಪ್ರಾಮಾಣಿಕ ಪ್ರಯತ್ನ ನಡೆಸಬೇಕು

» ಚಳ್ಳಕೆರೆ




ಗ್ರಾಮೀಣ ಭಾಗದಲ್ಲಿ ಗ್ರಾಮ ಪಂಚಾಯಿತಿ ಆಡಳಿತ ಉತ್ತಮವಾಗಿ ನಡೆಯಬೇಕಿದೆ. ಜನರಸಮಸ್ಯೆಗಳಿಗೆಪಂಚಾಯಿತಿಆಡಳಿತದ ವತಿಯಿಂದ ಸೂಕ್ತ ಪರಿಹಾರ ದೊರೆತಲ್ಲಿ ಹಲವಾರು ಸಮಸ್ಯೆಗಳು ದೂರವಾಗುತ್ತವೆ. ಆದ್ದರಿಂದ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಜನರ ಸಮಸ್ಯೆ ಪರಿಹಾರಕ್ಕೆ ಪ್ರಾಮಾಣಿಕ ಪ್ರಯತ್ನ ನಡೆಸಬೇಕೆಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಸೋಮಗುದ್ದು ಗ್ರಾಮ ಪಂಚಾಯಿತಿ ಆವರಣದಲ್ಲಿ ಪಂಚಾಯಿತಿ ಮಟ್ಟದ ಜನಸಂಪರ್ಕ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು. ಗ್ರಾಮೀಣ ಭಾಗದ ಹಲವಾರು ಸಮಸ್ಯೆಗಳು ಸಮಸ್ಯೆಗಳಿಗೆ ಪರಿಹಾರ ಇಲ್ಲೇ ಸುಲಭವಾಗಿ ಹುಡುಕಬಹುದು. ಸಾರ್ವಜನಿಕರ ಮೂಲಭೂತ ಸಮಸ್ಯೆಗಳಾದ ಕುಡಿಯುವ ನೀರು,ರಸ್ತೆ,ವಿದ್ಯುತ್ ಸಂಪರ್ಕ ಮುಂತಾದ ಕೆಲಸಗಳು ತ್ವರಿತ ಗತಿಯಲ್ಲಿ ನಡೆಯಬೇಕು. ಪಂಚಾಯಿತಿ ಮಟ್ಟದ ಹೊರತು ಪಡಿಸಿ ತಾಲ್ಲೂಕು ಮಟ್ಟದ ಅಧಿಕಾರಿಗಳಿಂದ ಯಾವುದೇ ಕೆಲಸವಾಗಲಿ ಅವುಗಳನ್ನು ಶೀಘ್ರದಲ್ಲೇ ಪರಿಹರಿಸುವಂತೆ ತಾಲ್ಲೂಕು ಮಟ್ಟಕ್ಕೆ ಸೂಚನೆ ನೀಡಲಾಗಿದೆ. ಬರ ಹಿನ್ನೆಲೆಯಲ್ಲಿ ನರೇಗಾ ಯೋಜನೆಯಡಿ ಹೆಚ್ಚು ಮಾನವ ದಿನಗಳನ್ನು ನಿರ್ಮಿಸುವ ಕಾರ್ಯಕ್ಕೆ ತಾಲ್ಲೂಕು ಪಂಚಾಯಿತಿ ಮುಂದಾಗಬೇಕು ಎಂದರು.

ಗ್ರಾಮ ಪಂಚಾಯಿತಿ ಅಧ್ಯಕ್ಷೆ ಜಯಲಕ್ಷ್ಮಿ ಮಾತನಾಡಿ, ಈ ಭಾಗದ ಶಾಸಕರಾಗಿ ಮೂರನೇ ಬಾರಿಗೆ ಆಯ್ಕೆಯಾಗುವ ಮೂಲಕ ಶಾಸಕ ಟಿ.ರಘುಮೂರ್ತಿ ಗ್ರಾಮೀಣ ಭಾಗದ ಸಮಸ್ಯೆಗಳಿಗೆ ಹೆಚ್ಚು ಆದ್ಯತೆ ನೀಡುತ್ತಾ ಬಂದಿದ್ದಾರೆ. ಬಹುತೇಕ ಎಲ್ಲಾ ಸಮಸ್ಯೆಗಳಿಗೂ ಪರಿಹಾರ ಒಂದೇಸಾರಿ ದೊರೆಯುವುದಿಲ್ಲವಾದರೂ ತಾಲ್ಲೂಕು ಆಡಳಿತ, ರೈತರು ಮತ್ತು ಜನ ಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸುವ ವೇಗವನ್ನು ಹೆಚ್ಚಿಸಿಕೊಳ್ಳಬೇಕು ಎಂದರು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಗ್ರಾಮೀಣ ಜನರಆರೋಗ್ಯದಸುಧಾರಣೆಗೆಸ್ವಚ್ಛತೆಯೂ ಸೇರಿದಂತೆ ಎಲ್ಲಾ ಕೆಲಸ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಲಾಗುತ್ತಿದೆ ಎಂದರು. ಕಾರ್ಯಕ್ರಮದಲ್ಲಿ ತಹಶೀಲ್ದಾರ್ ರೇಹಾನ್‌ಪಾಷ, ಇಒ ಶಶಿಧರ, ಅಖಂಡ ಕರ್ನಾಟಕ ರೈತ ಸಂಘದ ಸಂಸ್ಥಾಪಕ ಅಧ್ಯಕ್ಷ ಸೋಮಗುದ್ದುರಂಗಸ್ವಾಮಿ, ಗ್ರಾಮದ ಮುಖಂಡರಾದ ಏಕಾಂತಪ್ಪ, ಹೊನ್ನೂರಪ್ಪ, ಮಲ್ಲಿಕಾರ್ಜುನ, ಶ್ರೀನಿವಾಸ್, ಅಜಿತ್, ಸತೀಶ್‌ಬಾಬು, ಕಂದಾಯಾಧಿಕಾರಿ ಲಿಂಗೇಗೌಡ, ಪಿಡಿಒ ತ್ರಿವೇಣಿ, ಗ್ರಂಥಪಾಲಕ ರಮೇಶ್ ಮುಂತಾದವರು ಉಪಸ್ಥಿತರಿದ್ದರು.

# ಪಂಚರಾಜ್ಯಗಳಿಗೆ ಹಣ ಕಳಿಸುವ ಎಟಿಎಂ ಸರ್ಕಾರ ಸಿದ್ದರಾಮಯ್ಯ ಸರ್ಕಾರ: ಕಾಗೇರಿ

» ಚಳ್ಳಕೆರೆ



ಪಂಚರಾಜ್ಯಗಳ ಚುನಾವಣೆ ಹಣ ಕಳಿಸುವ ಎಟಿಎಂ ಸರ್ಕಾರವಾಗಿ ಕಾಂಗ್ರೆಸ್ ವರ್ತಿಸುತ್ತಿದೆ. ಭ್ರಷ್ಟಾಚಾರ ಹೆಚ್ಚಾಗಿ, ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂದು ಮಾಜಿ ಸ್ಪೀಕರ್, ಶಿರಸಿ ಕ್ಷೇತ್ರದ ಶಾಸಕ ವಿಶ್ವೇಶ್ವರ ಹೆಗಡೆ ಕಾಗೇರಿ ಆರೋಪಿಸಿದರು.

ಅವರು, ನಗರದ ಛೇಂಬರ್ ಆಫ್ ಕಾರ್ಮಸ್ ಸಂಭಾಗಣದಲ್ಲಿ ವರ್ತಕರಿಗೆ ಏರ್ಪಡಿಸಿದ್ದ ಸಮಾಲೋಚನಾ ಸಭೆಯಲ್ಲಿ ಮಾತನಾಡಿ,

ಪ್ರಸ್ತುತ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ರಚನೆಯಾದಾಗಿನಿಂದ ಅವರು ಮುಖ್ಯಮಂತ್ರಿ, ಇವರು ಮುಖ್ಯಮಂತ್ರಿ, ಐದು ಜನ ಉಪಮುಖ್ಯಮಂತ್ರಿ ಮಾಡಬೇಕು ಎಂಬ ಕಿತ್ತಾಟದಲ್ಲೇ ಕಾಲಕಳೆಯುತ್ತಿದೆ. ರಾಜ್ಯದ ಜನರು ಬರಗಾಲ ದುಸ್ಥಿತಿಯಲ್ಲಿದ್ದಾರೆ ಅವರ ಬಗ್ಗೆ ಚಿಂತನೆ ಮಾಡದೆ ಭ್ರಷ್ಟಾಚಾರದಲ್ಲಿ ತೊಡಗಿದೆ. ಪಂಚರಾಜ್ಯಗಳ ಚುನಾವಣೆ ಇಟ್ಟ 102 ಕೋಟಿ ಹಣ ಗುತ್ತಿಗೆದಾರ ಮನೆಯಲ್ಲಿ ದೊರೆಯುತ್ತಿರುವುದು ಭ್ರಷ್ಟಾಚಾರಕ್ಕೆ ಹಿಡಿದ ಕೈಗನ್ನಡಿ. ಐದು ಗ್ಯಾರಂಟಿಗಳಿಗೆ ಹಣ ಜೋಡಿಸುವುದರಲ್ಲೇ ಕಾಲ ಹರಣ ಮಾಡುವ ಮೂಲಕ ರಾಜ್ಯ ರೈತ, ಬಡವರ ಹಿತ ಮರೆತಿದ್ದಾರೆ. ಗ್ಯಾರಂಟಿಗಳೂ ಸಹ ಜನರಿಗೆ ಎಷ್ಟರಮಟ್ಟಿಗೆ ತಲುಪುತ್ತಿವೆ ಎಂದು ಜನರಿಗೆ ಗೊತ್ತಿದೆ. ಬರಗಾಲದಿಂದ ವಾಣಿಜ್ಯೋದ್ಯಮ, ಜನ, ಜಾನುವಾರುಗಳು ತತ್ತರಿಸಿವೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ಅತಿವೃಷ್ಠಿ, ಅನಾವೃಷ್ಠಿಗೆ ಕೇಂದ್ರ ಸರ್ಕಾರ ಪ್ರಧಾನಿ ನರೇಂದ್ರ ಮೋದಿ 2006–14, 2850, 2014–22, 13488 ಒಟ್ಟು ರಾಜ್ಯಕ್ಕೆ 16338 ಕೋಟಿ ಹಣವನ್ನು ಈಗಾಗಲೇ ಬಿಡುಗಡೆ ಮಾಡಿದೆ. ಆದರೆ, ರಾಜ್ಯ ಮುಖ್ಯಮಂತ್ರಿ ಮಾತ್ರ ಕೇಂದ್ರ ಸರ್ಕಾರ ನೀಡಿದ ನೆರವನ್ನು ಜನರ ಮುಂದೆ ಹೇಳದೆ. ಕೇಂದ್ರ ಸರ್ಕಾರ ಬರಗಾಲಕ್ಕೆ ಹಣ ಬಿಡುಗಡೆ ಮಾಡುತ್ತಿಲ್ಲವೆಂದು ಕೇಂದ್ರದ ಮೇಲೆ ಆರೋಪಿಸುತ್ತಿದ್ದಾರೆ ಎಂದರು.

ಛೇಂಬರ್ ಆಫ್ ಕಾರ್ಮಸ್ ಜಿಲ್ಲಾಧ್ಯಕ್ಷ ಎನ್.ಸತೀ□□ಬಾಬು ಮಾತನಾಡಿ, ಆಗ್ರೋ ಪ್ರೋಸಸಿಂಗ್ ಯೂನಿ□□ಗೆ ವಿದ್ಯುತ್ ಮಿನಿಮಮ್ ಚಾ□□□□ನ್ನು ಬರಗಾಲ ಇರುವ ತನ ರದ್ದು ಮಾಡಬೇಕು, ವಿದ್ಯುತ್ ಬಿಲ್ ತೆರಿಗೆ



ಜಿಎ□□ಟಿ ಇ□□□□ಪುಟ್ ಕ್ರೆಡಿಂಟ್ ಅನುವು ಮಾಡಿಕೊಡಬೇಕು, ರೈತರಿಗೆ ಬೆಳೆ ಬೆಳೆಯಲು ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿಯಡಿ ಸಹಾಯ ಧನ ನೀಡಬೇಕು, ಕೃಷಿ ಸಂಸ್ಕರಣ ಘಟಕಗಳಿಗೆ ಆರ್ಥಿಕ ನೆರವು ಒದಗಿಸಬೇಕು, ರೈತರಿಗೆ ಪ್ರತಿ ಎಕರೆಗೆ 15 ಸಾವಿರ ಸಹಾಯ ಧನ ನೀಡಬೇಕು, ರಿಯಾಯ್ತಿ ದರದಲ್ಲಿ ಬೀಜ, ಗೊಬ್ಬರ ನೀಡಬೇಕೆಂದು ಮನವಿ ಮಾಡಿದರು. ದಲ್ಲಾಲರ ಸಂಘದ ಅಧ್ಯಕ್ಷ ಕೆ.ಎಂ. ಅರವಿಂದ ಮಾತನಾಡಿ, ಕಳೆದ ಸುಮಾರು 50 ವರ್ಷಗಳಿಂದ ಎಪಿಎಂಸಿ ಲೈಸನ್ಸ್ ಪಡೆದು ವ್ಯವಹಾರ ನಡೆಸುತ್ತಿದ್ದೇವೆ. ರೈತರಿಗೆ ಸಾಕಷ್ಟು ಆರ್ಥಿಕ ನೆರವು ನೀಡಿದ್ದೇವೆ. ಆದರೆ, ಲೈಸನ್ಸ್ ಪಡೆಯದೆ ಕಾರ್ಯನಿರ್ವಹಿಸುವವರಿಂದ ತೊಂದರೆಯಾಗುತ್ತಿದ್ದು ಈ ಬಗ್ಗೆ ಗಮನಹರಿಸಬೇಕು ಎಂದರು.

ಸಭೆಯಲ್ಲಿ ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್, ಚಿತ್ರದುರ್ಗ ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ, ಜಿಲ್ಲಾಧ್ಯಕ್ಷ ಎ.ಮುರುಳಿ, ಬಿಜೆಪಿ ರೈತ ಮೋರ್ಚಾ ರಾಜ್ಯ ಉಪಾಧ್ಯಕ್ಷ ನಿಂಗಪ್ಪಬೆಳವಾಡಿ, ಜಿಲ್ಲಾ ಬಿಜೆಪಿ ಉಪಾಧ್ಯಕ್ಷ ಬಾಳೆಮಂಡಿರಾಮದಾಸ್, ಜಯಪಾಲಯ್ಯ ನಗರಸಭಾ ಸದಸ್ಯ ವೆಂಕಟೇಶ್, ಸಿ.ಎಸ್.ಪ್ರಸಾದ್, ಡಿ.ಸೋಮಶೇಖಮಂಡಿಮಠ, ವಾಣಿಜ್ಯೋದ್ಯಮಿಗಳಾದ ಕೆ.ಎಂ.ಕೋಟ್ರೇಶ್, ಪಾರ್ಶ್ವನಾಥಜೈನ್, ಕೆ.ಶಿವಕುಮಾರ್, ಎಚ್.ವಿ.ಪ್ರಸನ್ನಕುಮಾರ್, ಎ.ಸಿ.ನಾಗೇಂದ್ರನ್, ಗೌರವಾಧ್ಯಕ್ಷ ಕೆ.ಬಸವರಾಜು(ವಂದನ), ಬಿಜೆಪಿ ಮಂಡಲಾಧ್ಯಕ್ಷ ಸೂರನಹಳ್ಳಿ ಶ್ರೀನಿವಾಸ್, ಮಾತೃಶ್ರೀ ಎನ್.ಮಂಜುನಾಥ, ಆದಿಭಾಸ್ಕರಶೆಟ್ಟಿ, ಬಿಜೆಪಿ ಮುಖಂಡ ಅನಿ□□ಕುಮಾರ್, ಇಂಧುಮತಿ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ನಾಯಕನಹಟ್ಟಿಯಲ್ಲಿ ಬರ ಅಧ್ಯಯನ ತಂಡದ ಸಣ್ಣಕೆರೆಯನ್ನು ವೀಕ್ಷಣೆ



**ಚಳ್ಳಕೆರೆ/ ನಾಯಕನಹಟ್ಟಿ** : ಜಿಲ್ಲೆಗೆ ಮಂಗಳವಾರ ಭೇಟಿ ನೀಡಿದ್ದ ಬಿಜೆಪಿ ಪಕ್ಷದ ಬರ ಅಧ್ಯಯನ ತಂಡಕ್ಕೆ ಒಣಗಿದ ಕೆರೆ, ಕಾಯಿ ಕಟ್ಟದ ಶೇಂಗಾ ಬೆಳೆ, ಒಣಗಿ ನಿಂತ ಮೆಕ್ಕೆಜೋಳದ ದರ್ಶನವಾಯಿತು. ತೀವ್ರ ಬರಗಾಲದಲ್ಲಿ ಇರುವ ರಾಜ್ಯಕ್ಕೆ ಪರಿಹಾರದ ಅಗತ್ಯತೆ ಮತ್ತು ಭದ್ರ ಮೇಲ್ದಂಡೆ ಕಾಮಗಾರಿ ಪೂರ್ಣವಾಗಿ ಕೆರೆಗಳಿಗೆ ನೀರು ಹರಿಸುವಂತೆ ರೈತರು ಮನವಿ ಮಾಡಿದರು.ಅವರು ತಾಲ್ಲೂಕಿನ ನಾಯಕನಹಟ್ಟಿ ಹೋಬಳಿಯ ಉಪ್ಪಾರಹಟ್ಟಿ, ನೆಲಗೇತನಹಟ್ಟಿ ರೈತರ ಜಮೀನು ಭೇಟಿ ನೀಡಿ ಶೇಂಗಾ ಬೆಳೆ ಹಾಗೂ ನಾಯಕನಹಟ್ಟಿ ಗ್ರಾಮದ ಐತಿಹ್ಯ ಚಿಕ್ಕಕೆರೆ ವೀಕ್ಷಿಸಿ ಮಾತನಾಡಿದರು.ರಾಜ್ಯ ಸರಕಾರದ ಗ್ಯಾರಂಟಿ ಯೋಜನೆಗಳಿಂದ ಬೊಕ್ಕಸ ಖಾಲಿಯಾಗಿದೆ. ಹೀಗಾಗಿ ಬೆಳೆ ಪರಿಹಾರ ಮತ್ತು ಬರ ಪರಿಹಾರಕ್ಕೆ ಯಾವುದೇ ಯೋಜನೆ ರೂಪಿಸಿಲ್ಲ. ಚುನಾವಣೆಯಲ್ಲಿ ಕೊಟ್ಟ ಗ್ಯಾರಂಟಿಗಳನ್ನು ಸಹ ಕಾಂಗ್ರೆಸ್ ಪೂರ್ಣಗೊಳಿಸಿಲ್ಲ. ಇಲ್ಲಿನ ಚಿಕ್ಕ ಕೆರೆಯಲ್ಲಿ ಹನಿ ನೀರಿಲ್ಲದ ಪರಿಸ್ಥಿತಿ ಇದೆ. ರಾಜ್ಯದಲ್ಲಿ ಅತಿ ಕಡಿಮೆ ಮಳೆ ಬೀಳುವ ಪ್ರದೇಶ ಎಂದು ನಾನು ಗಮನಿಸಿದ್ದೇನೆ. ಆದರೆ ಇಲ್ಲಿ ಬರ ಪರಿಸ್ಥಿತಿ ಎದುರಿಸಲು ಯಾವುದೇ ಯೋಜನೆ ರೂಪಿಸಿಲ್ಲ. ಸೂರ್ಯಕಾಂತಿ ಬೆಳೆಗಳು ಒಂದಕ್ಕೊಂದುಪೈಪೋಟಿಯಲ್ಲಿ ವಿಫಲವಾಗಿವೆ. ಒಟ್ಟಾರೆ ಸಂಪೂರ್ಣ ಬರ ಪರಿಸ್ಥಿತಿ ಕಣ್ಣಿಗೆ ರಾಚುತ್ತಿದೆ. ಇಲ್ಲಿಯವರೆಗೂ ಮಲಗಿದ್ದ ಉಸ್ತುವಾರಿ ಸಚಿವರನ್ನು ಮುಖ್ಯಮಂತ್ರಿಗಳು ಜಿಲ್ಲಾ ಪ್ರವಾಸ ಕೈಗೊಳ್ಳುವಂತೆ ಸೂಚಿಸಿದ್ದಾರೆ. ಸರಕಾರದ ಬಳಿ ಗ್ಯಾರಂಟಿಗಳಿಗೆ ಹಣವಿದ್ದರೆ, ಬೆಳೆಪರಿಹಾರಕ್ಕೆ ಹಣ ನೀಡಲಿ. ಗ್ಯಾರಂಟಿಗೆ ಕೊಟ್ಟ ಮಹತ್ವನ್ನು ಬೆಳೆ ಪರಿಹಾರಕ್ಕೆ ನೀಡಬೇಕು. ಕಾಟಾಚಾರಕ್ಕೆ ಡಿಸಿ ಗಳಿಗೆ ಕೆಲವು ಕೋಟಿಗಳನ್ನು ನೀಡಿ ಸರಕಾರ ಕೈತೊಳೆದುಕೊಂಡಿದೆ ಎಂದರು.

**ಗೌರವಾನ್ವಿತ 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಚಿತ್ರದುರ್ಗ.**
**ಸಿ.ಆರ್.ಮಿಸ್.ಸಂಖ್ಯೆ: 847/2023**

**ಅರ್ಜಿದಾರರು:**
1) ರಘು ಚಿಂತನ್. ಎನ್ ಬಿನ್ ನಿಂಗಪ್ಪ. ಎಮ್, ವಯಸ್ಸು ಸುಮಾರು 19 ವರ್ಷ, ವಾಸ: ನರೇನಹಾಳ್ ಗ್ರಾಮ, ಜೆ.ಎನ್. ಕೋಟೆ ಅಂಚೆ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆ. 2) ಶಾಲಿನಿ. ಎನ್ ಬಿನ್ ನಿಂಗಪ್ಪ. ಎಮ್, ವಯಸ್ಸು ಸುಮಾರು 15 ವರ್ಷ, ವಾಸ: ವಾಗ್ದೇವಿ ಶಾಲೆ ಹಿಂಭಾಗ, ಹಿರಿಯೂರು.
2ನೇ ಅರ್ಜಿದಾರರು ಅಪ್ರಾಪ್ತ ವಯಸ್ಕರಾಗಿದ್ದು ಅವರ ಪರವಾಗಿ ಅವರ ಅಣ್ಣ 1ನೇ ಅರ್ಜಿದಾರರು ಪ್ರತಿನಿಧಿಸಲ್ಪಡುವರು.

**:ವಿರುದ್ಧ:**
ಎದುರುದಾರರು: ತಹಶೀಲ್ದಾರ್ / ಜನನ ಮತ್ತು ಮರಣ ನೋಂದಣಾಧಿಕಾರಿಗಳು, ತಾಲ್ಲೂಕು ಕಚೇರಿ, ಚಿತ್ರದುರ್ಗ.

**ಸಾರ್ವಜನಿಕ ಪ್ರಕಟಣೆ**

ಈ ಮೂಲಕ ತಿಳಿಯಪಡಿಸುವುದೇನೆಂದರೆ, ಈ ಮೇಲ್ಕಂಡ ಅರ್ಜಿದಾರರು, ಎದುರುದಾರರ ವಿರುದ್ಧ ಮಾನ್ಯ ಘನ ನ್ಯಾಯಾಲಯದಲ್ಲಿ 1 ಮತ್ತು 2ನೇ ಅರ್ಜಿದಾರರ ಅಜ್ಜ ಮೈಲಾರಪ್ಪ ಬಿನ್ ಯಲ್ಲಪ್ಪ ಇವರು ದಿನಾಂಕ: 20.06.1975 ರಂದು ತಮ್ಮ ಊರಾದ ನರೇನಹಾಳ್ ಗ್ರಾಮ, ಜೆ.ಎನ್. ಕೋಟೆ ಅಂಚೆ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆಯಲ್ಲಿ ಮರಣ ಹೊಂದಿದ್ದು ಕುಟುಂಬದ ಆಸ್ತಿಗಳ ಖಾತೆ ಮೂಲಕ ಹಕ್ಕು ಬದಲಾವಣೆ ಮತ್ತು ಇತರೆ ಸೌಲಭ್ಯಗಳನ್ನು ಪಡೆಯುವ ಸಲುವಾಗಿ ನ್ಯಾಯಾಲಯದ ಮೂಲಕ ಸದರಿ ಮೈಲಾರಪ್ಪ ಬಿನ್ ಯಲ್ಲಪ್ಪ ರವರ ಮರಣ ಪ್ರಮಾಣ ಪತ್ರವನ್ನು ಪಡೆಯಲು ಈ ಅರ್ಜಿಯನ್ನು ನ್ಯಾಯಾಲಯದಲ್ಲಿ ಸಲ್ಲಿಸಿರುತ್ತಾರೆ. ಈ ವಿಷಯದ ಬಗ್ಗೆ ಈ ಅರ್ಜಿಯಲ್ಲಿ ತಿಳಿಸಿರುವ ಅರ್ಜಿದಾರರನ್ನು ಬಿಟ್ಟು ಬೇರೆ ವಾರಸುದಾರರು ತಕರಾರು ಸಲ್ಲಿಸುವವರಿದ್ದರೆ ನ್ಯಾಯಾಲಯದಲ್ಲಿ ಮುದ್ದತ್ತು ದಿನಾಂಕ: 07.10.2023 ರಂದು ಬೆಳಿಗ್ಗೆ 11:00 ಗೆ ಈ ಕೇಸಿನಲ್ಲಿ ಖುದ್ದಾಗಿ ಆಗಲೀ ಅಥವಾ ತಮ್ಮ ವಕೀಲರ ಮುಖಾಂತರವಾಗಲೀ ನ್ಯಾಯಾಲಯಕ್ಕೆ ಹಾಜರಾಗಿ ತಮ್ಮ ತಕರಾರನ್ನು ಸಲ್ಲಿಸತಕ್ಕದ್ದು, ತಪ್ಪಿದ್ದಲ್ಲಿ ಈ ಮೇಲ್ಕಂಡ ಅರ್ಜಿಯನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ಎಂದು ತಿಳಿಯಿರಿ.

ನ್ಯಾಯಾಲಯದ ಮುದ್ರೆ ಮತ್ತು ನನ್ನ ಸಹಿಯೊಂದಿಗೆ ದಿನಾಂಕ: 08.09.2023 ರಂದು ನೀಡಲಾಗಿದೆ.

ಸಹಿ/– ಶಿರಸ್ತೆದಾರರು, ಗೌರವಾನ್ವಿತ 1ನೇ ಕಿರಿಯ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ., ಚಿತ್ರದುರ್ಗ.
ಸಹಿ/– ಸಿ. ತಿಮ್ಮಣ್ಣ, ಅರ್ಜಿದಾರರ ಪರ ವಕೀಲರು, ಚಿತ್ರದುರ್ಗ.
ದಿನಾಂಕ: 08.09.2023.

## ಪ್ರಮುಖ ಸುದ್ದಿ

**ಸಾಣೇಹಳ್ಳಿ ರಾಷ್ಟ್ರೀಯ ನಾಟಕೋತ್ಸವ; ಗಾಯಕ ಪಿಚ್ಚಳ್ಳಿ ಶ್ರೀನಿವಾಸ್ ಆಗ್ರಹ**

# ಗ್ರಾಮೀಣ, ಜಾನಪದ ಕಲಾವಿದರನ್ನು ಪೋಷಿಸಿ

» ಹೊಸದುರ್ಗ




ಈ ನೆಲದ ಧ್ವನಿಗಳನ್ನು ಅಂದರೆ ಗ್ರಾಮೀಣ, ಜಾನಪದ ಕಲಾವಿದರನ್ನು ಉಳಿದ ಕಲಾವಿದರ ಹಾಗೆ ಪೋಷಿಸಿ ಎಂದು ಚಿಂತಕ ಪಿಚ್ಚಳ್ಳಿ ಶ್ರೀನಿವಾಸ್ ಆಗ್ರಹಿಸಿದರು.

ಹೊಸದುರ್ಗ ತಾಲೂಕಿನ ಸಾಣೇಹಳ್ಳಿಯ ಶ್ರೀ ಬಯಲು ರಂಗ ಮಂದಿರದಲ್ಲಿ ಶ್ರೀ ಪಂಡಿತಾರಾಧ್ಯ ಸ್ವಾಮೀಜಿವರ ನೇತೃತ್ವದಲ್ಲಿ ನಡೆಯುತ್ತಿರುವ ರಾಷ್ಟ್ರೀಯ ನಾಟಕೋತ್ಸವದಲ್ಲಿಭಾಗವಹಿಸಿ "ಕಲಾವಿದರ ಸ್ಥಿತಿ–ಗತಿ ಕುರಿತಂತೆ ಮಾತನಾಡಿದರು.

ಸಮಾಜದ ಆರೋಗ್ಯ ಕಾಪಾಡಲು, ಸಮಾಜವನ್ನು ಎಚ್ಚರಿಸಲು ಜಾನಪದ ಗಾಯಕರು, ತತ್ವಪದ ಗಾಯಕರು ನಿರಂತರವಾಗಿ ಹಾಡುತ್ತಿದ್ದಾರೆ. ಅವರನ್ನು ಪ್ರೋತ್ಸಾಹಿಸದಿದ್ದರೆ ಈ ಸಮಾಜ ವಿಕೃತಿ ಕಡೆಗೆ ತೆರಳುತ್ತದೆ. ಕೇಳಲು ಹಾಡಿರದ, ನೋಡದ ನಾಟಕವಿರದ ಸಮಾಜ ಬಂಡೆಯಿದ್ದ ಹಾಗೆ. ಆದರೆ ಸಾಣೇಹಳ್ಳಿಯಂಥ ಗ್ರಾಮಗಳು ನೂರಾರು ಆಗಬೇಕು. ಪಂಡಿತಾರಾಧ್ಯ ಸ್ವಾಮೀಜಿಯಂಥವರು ಹೆಚ್ಚಬೇಕು ಎಂದು ಕೋರಿದರು.

ಮೇಲುಕೀಳು, ಭಿನ್ನಭೇದವು ಕಲಾವಿದರ ನಡುವೆ ಸೃಷ್ಟಿಯಾಗಿದೆ. ಇದನ್ನು ಹೋಗಲಾಡಿಸಬೇಕಿದೆ. ಮುಂಬೈ ಮೊದಲಾದ ನಗರಗಳಿಂದ ಕಲಾವಿದರನ್ನು ವಿಮಾನದಲ್ಲಿ ಕರೆಸಿ, ಹವಾನಿಂತ್ರಿತ ಕಾರಲ್ಲಿ ಕರೆದುಕೊಂಡು ಹೋಗಿ, ಹವಾನಿಯಂತ್ರಿತ ಕೋಣೆಯಲ್ಲಿ ಉಳಿಸಿ ಕಾರ್ಯಕ್ರಮದ ನಂತರ ಲಕ್ಷಾಂತರ ರೂಪಾಯಿ ಚೆಕ್ ಕೊಡುತ್ತಾರೆ. ಹೀಗೆಯೇ ಸಿನಿಮಾದ ಹಾಡುಗಳನ್ನು ಹಾಡುವ ಗಾಯಕರು ಟ್ರ್ಯಾಕ್ ಹಾಕಿಕೊಂಡು ಹಾಡಿ ಲಕ್ಷಾಂತರ ರೂಪಾಯಿ ಸಂಭಾವನೆ ಪಡೆಯುತ್ತಾರೆ. ಆದರೆ ಜಾನಪದ ಕಲಾವಿದರಿಗೆ 15 ಸಾವಿರ ರೂಪಾಯಿ ಸಂಭಾವನೆ ಕೊಡುತ್ತಾರಷ್ಟೇ. ಈ ತಾರತಮ್ಯ ಹೋಗಲಾಡಬೇಕು ಎಂದು ಮನವಿ ಮಾಡಿಕೊಂಡರು.

ಕರ್ನಾಟಕ ಜಾನಪದ ಅಕಾಡೆಮಿ ಅಧ್ಯಕ್ಷನಾಗಿದ್ದಾಗ 30 ಜಿಲ್ಲೆಗಳ 145 ತಾಲ್ಲೂಕುಗಳಿಗೆ ಭೇಟಿ ನೀಡಿದೆ. ದಾವಣಗೆರೆ ಜಿಲ್ಲೆಯ ಹಳ್ಳಿಯೊಂದಕ್ಕೆ ಹೋದಾಗ ಎಂಬತ್ತು ದಾಟಿದ ಜಾನಪದ ಗಾಯಕಿಯು ಗುಡಿಸಲಲ್ಲಿರುವೆ, ಮನೆ ಕಟ್ಟಿಸಿಕೊಡಿ ಎಂದು ಕೇಳಿದ್ದರು. 88 ವರ್ಷ ವಯಸ್ಸಿನ ತಂಬೂರಿ ಜವರಯ್ಯ 'ಗುರುವೆ ನಿನ್ನ ಆಟ ಬಲ್ಲವರು ಯರ‍್ಯಾರು? ಶಿವನೇ ನಿನ್ನ ಆಟ ಬಲ್ಲವರು ಯಾರ‍್ಯಾರು?' ಎಂದು ಅವರು ಐದಾರು ವರ್ಷ ವಯಸ್ಸಿನವರಿದ್ದಾಗಿನಿಂದ ಹಾಡುತ್ತಿದ್ದಾರೆ.

ಯಾರಿಂದ ಕಲಿತರು ಗೊತ್ತಿಲ್ಲ ಅವರಿಗೆ. ಶರಣರ ತತ್ವಗಳನ್ನು ಸಾರುವ ಅವರ ತತ್ವಪದ ಗಾಯಕರಂಥ ಅನೇಕರಿದ್ದಾರೆ. ಅವರಿಗೆ ಸರಿಯಾಗಿ ಮನೆಯಿಲ್ಲ ಎಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T